MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 256 | ಶುಕ್ರವಾರ : 25-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 256 | FRIDAY : 25-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮಹದಾಯಿ ಯೋಜನೆ: ಗೋವಾ ಸಿಎಂ ಹೇಳಿಕೆಗೆ ಡಿಕೆಶಿ ಕಿಡಿ

**ಬೆಂಗಳೂರು,ಜು.24–**ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ ಮಹದಾಯಿ ಯೋಜನೆ ಕುರಿತಂತೆ ಕೇಂದ್ರ ಸರ್ಕಾರ ಅನುಮತಿ ಕೊಡುವುದಿಲ್ಲ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿಕೆಗೆ ಕೆಂಡಾಮಂಡಲರಾಗಿರುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಗೋವಾ ಮುಖ್ಯಮಂತ್ರಿಗಳು ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ ಎಂದು ಕಿಡಿಕಾರಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹದಾಯಿ ವಿಚಾರದಲ್ಲಿ ಪ್ರಮೋದ್ ಸಾವಂತ್ ನೀಡಿರುವ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದರು.ಸಾವಂತ್ ಅವರಿಗೆ ಒಕ್ಕೂಟದ ವ್ಯವಸ್ಥೆ ಬಗ್ಗೆ ಗೊತ್ತಿಲ್ಲ. ಈಗಾಗಲೇ ಮಹದಾಯಿ ಯೋಜನೆ ಬಗ್ಗೆ ತೀರ್ಮಾನವಾಗಿದ್ದು, ಟೆಂಡರ್ ಕೂಡ ಕರೆಯಲಾಗಿದೆ.ಕಾಮಗಾರಿ ಆರಂಭಿಸಬೇಕು ಎಂದರು.ಇವೆಲ್ಲದರ ನಡುವೆ ಅರಣ್ಯ ಇಲಾಖೆ ಕೊಟ್ಟಿರುವ ನೋಟಿಸ್‌ಗೆ ನಾವು ಸೂಕ್ತ ಉತ್ತರ ಕೊಡುತ್ತೇವೆ.ಮಹದಾಯಿ ವಿಚಾರದಲ್ಲಿ ನಮ್ಮ ಕೆಲಸವನ್ನು ನಾವು ಪ್ರಾರಂಭಿಸುತ್ತೇವೆ ಎಂದು ಸ್ಪಷ್ಟಪಡಿಸಿದರು.ಮಹದಾಯಿ ಯೋಜನೆ ರಾಜ್ಯ ಸಂಸದರ ಸ್ವಾಭಿಮಾನದ ಪ್ರಶ್ನೆಯಾಗಿದೆ. ಈ ವಿಚಾರದಲ್ಲಿ ಸಂಸದರು ಬಾಯಿ ಮುಚ್ಚಿಕೊಂಡಿರುವುದೇ ತಪ್ಪು ಎಂದು ತರಾಟೆಗೆ ತೆಗೆದುಕೊಂಡ ಅವರು, ಒಂದು ಲೋಕಸಭಾ ಸ್ಥಾನಕ್ಕೋಸ್ಕರ ನಾವು ನಮ್ಮನ್ನು ಮಾರಿಕೊಳ್ಳಲು ಸಾಧ್ಯವಿಲ್ಲ. 28 ಸದಸ್ಯರು, 12 ಮಂದಿ ರಾಜ್ಯಸಭೆ ಸದಸ್ಯರು ಈ ಬಗ್ಗೆ ಮಾತನಾಡಬೇಕು. ತಾವು ದೆಹಲಿಗೆ ತೆರಳಿ ಸಂಸದರ ಜತೆ ಚರ್ಚಿಸುತ್ತೇನೆ. ಪ್ರಧಾನಿ ಮೋದಿ, ಜಲಶಕ್ತಿ ಮಂತ್ರಿಗಳ ಭೇಟಿಗೂ ಸಮಯ ಕೇಳಿ ಈ ಬಗ್ಗೆ ಚರ್ಚೆ ಮಾಡುವುದಾಗಿ ಹೇಳಿದರು. ಮಹದಾಯಿ ವಿಚಾರದಲ್ಲಿ ಕೇಂದ್ರ ಜಲಶಕ್ತಿ ಮತ್ತು ಅರಣ್ಯ ಸಚಿವರು ರಾಜಕೀಯ ಮಾಡುತ್ತಿಲ್ಲ. ಅವರೂ ಸಹ ಅಭಿವೃದ್ಧಿಯಾಗಬೇಕು ಎಂದು ಹೇಳಿದ್ದಾರೆ. ಆದರೆ, ಮಹದಾಯಿ ವಿಚಾರದಲ್ಲಿ ಗೋವಾ ರಾಜಕೀಯ ಮಾಡುತ್ತಿದೆ. ಮಹದಾಯಿ ಕಾಮಗಾರಿ ಪ್ರಾರಂಭಿಸಲು ಅಗತ್ಯ ಕ್ರಮಕೈಗೊಳ್ಳುತ್ತೇವೆ ಎಂದು ಗೋವಾ ಮುಖ್ಯಮಂತ್ರಿ ಸಾವಂತ್ ಅವರಿಗೆ ತಿರುಗೇಟು ನೀಡಿದರು.

## ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕಾರಕ್ಕೆ ಅಮರೇಶ ಚಿಲ್ಕರಾಗಿ ಆಯ್ಕೆ

ಯುವ ಮಾರ್ಗ ಸುದ್ದಿ

**ಅರಕೇರಾ,ಜು.24–**ರಾಯಚೂರು ಜಿಲ್ಲಾ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಪ್ರತಿವರ್ಷ ನೀಡುವ ಜಿಲ್ಲಾ ಮಟ್ಟದದಿಂದ ಕೊಡಲ್ಪಡುವ 2025–26 ನೇ ಸಾಲಿನ ಜಿಲ್ಲಾ ಮಟ್ಟದ ಅತ್ಯತ್ತಮ ವರದಿಗಾರ ಪ್ರಶಸ್ತಿಗೆ ಆಯ್ಕೆಯಾದ ದೇವದುರ್ಗ ತಾಲೂಕು ವಿಜಯವಾಣಿ ಕನ್ನಡ ದಿನ ಪತ್ರಿಕೆಯ ವರದಿಗಾರರಾದ ಅಮರೇಶ ಚಿಲ್ಕರಾಗಿ ಪ್ರಶಸ್ತಿಗೆ ಭಾಜನ 'ರಾಗಿದ್ದಾರೆ.

ಇವರ ಪರಿಚಯ ಶ್ರೀಮತಿ ಅಂಬಮ್ಮ , ಬಸಪ್ಪ ದಂಪತಿಯ ಸುಪುತ್ರನಾಗಿದ್ದು .ಮೂಲತ ಚೀಲ್ಕರಾಗಿ ಗ್ರಾಮದಲ್ಲಿ 1–6–1987 ರಲ್ಲಿ ಜನಿಸಿದರು. ಸ್ವಗ್ರಾಮ ಚಿಲ್ಕಾರಗಿ ಪ್ರಾಥಮಿಕ ಶಿಕ್ಷಣವನ್ನು ಮುಗಿಸಿದ್ದು ಪ್ರೌಢಶಾಲಾ ಶಿಕ್ಷಣವನ್ನು ಮುರಾರ್ಜಿ ದೇಸಾಯಿ ವಸತಿ ಶಾಲೆ ಜಾಲಹಳ್ಳಿ .ಪಿಯು ಶಿಕ್ಷಣವನ್ನು ಬಸವೇಶ್ವರ ಕಾಲೇಜು ಲಿಂಗಸೂರುದಲ್ಲಿ.ಡಿಇಡಿ ರಾಯಚೂರಿನ ಕನ್ಯಕಾ ಪರಮೇಶ್ವರಿ.ಪದವಿ ಶಿಕ್ಷಣ ಪ್ರಥಮ ದರ್ಜೆ ಕಾಲೇಜು ರಾಯಚೂರು. ಎಂ.ಎ.ಕುವೆಂಪು ವಿಶ್ವವಿದ್ಯಾಲಯ ರಾಯಚೂರು 2012–2014 ರಲ್ಲಿ 26ನೇ ವರ್ಷಕ್ಕೆ ಪ್ರತಿಕೋದ್ಯಮಕ್ಕೆ ಪ್ರವೇಶ ರಾಯಚೂರಿನಲ್ಲಿ ಎರಡುವರೇವರ್ಷ ವಿಜಯವಾಣಿ ಜಿಲ್ಲಾ ಸಹಾಯಕ ವರದಿಗಾರರಾಗಿ ಕಾರ್ಯನಿರ್ವಹಿಸಿದ್ದಾರೆ. 2014ರ ಜುಲೈ ನಿಂದ ವಿಜಯವಾಣಿ ಗಂಗಾವತಿ ಆವೃತಿಯ ಉಪ ಸಂಪಾದಕರಾಗಿ.ಹಿರಿಯ ಉಪ ಸಂಪಾದಕರಾಗಿ 2019ರ ವರೆಗೆ ಕೆಲಸ ನಿರ್ವಹಿಸಿ 2019 ಜೂನ ನಿಂದ ದೇವದುರ್ಗ ವಿಜಯವಾಣಿ ತಾಲೂಕು ವರದಿಗಾರ'ರಾಗಿ ಪ್ರಸುತ್ತ ಕಾರ್ಯನಿರ್ವಹಿವ ಸುತ್ತಿದ್ದಾರೆ.

**ಇವರಿಗೆ ದೊರೆತ್ತಿರುವ ಪ್ರಶಸ್ತಿಗಳು:** 2023ರಲ್ಲಿ ದಾವಣಗೆರದಲ್ಲಿ ಜರುಗಿದೆ ರಾಜ್ಯಮಟ್ಟದ 38ನೇ ಪತ್ರಕರ್ತರ ಸಮ್ಮೇಳನದಲ್ಲಿ ರಾಜ್ಯಮಟ್ಟದ ಅತ್ತುತ್ತಮ ವರದಿಗಾರ ಪ್ರಶಸ್ತಿನೀಡಲಾಗಿದೆ. ದೇವದುರ್ಗ ತಾಲೂಕಿನ ಅರಣ್ಯ ಸಂಪತ್ತು ಸಂರಕ್ಷಣೆ ಕುರಿತು ಮಾಡಿದ ವರದಿಗೆ( ಪರಿಸರ ಸಂಸರಕ್ಷಣೆ ವಿಭಾಗ) ಆರ್ ಎಲ್ ವಾಸುದೇವರಾವ್ ರಾಜ್ಯ ಮಟ್ಟದ ಪ್ರಶಸ್ರತಿ ನೀಡಿ ಗೌರವಿಸಲಾಗಿದೆ.2024ನೇಸಾಲಿನಲ್ಲಿ ದೇವದುರ್ಗದಲ್ಲಿ ನಡೆದ ತಾಲೂಕು ಮಟ್ಟದ ಪತ್ರಕರ್ತರ ದಿನಾಚರಣೆಯಲ್ಲಿ ದುರ್ಗದ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.ಪತ್ರಿಕಾರಂಗದಲ್ಲಿ ಸುಮಾರು 14ವರ್ಷಗಲಿಂದ ವಿಜಯವಾಣಿ ಪತ್ರಿಕೆ ಯಲ್ಲಿ ಕೆಲಸಮಾಡುತ್ತಿರುವ ಇವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ರಿ) ಜಿಲ್ಲಾ ಘಟಕ ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಜಿಲ್ಲಾ ಮಟ್ಟದ ಪತ್ರಿಕಾ



ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ದಿನಾಂಕ 27–7–2025ರಂದು ಲಿಂಗಸಗೂರಿನಲ್ಲಿ ನಡೆಯುವ ಪ್ರಶಸ್ತಿ ಪ್ರದಾನ ಸಮಾರಂ ಭದಲ್ಲಿ ಸನ್ಮಾನಸ್ವೀಕರಿಸಲಿದ್ದಾರೆ.


ಆರೋಗ್ಯ ಶೈಕ್ಷಣಿಕ,ರಸ್ತೆ ಚರಂಡಿ ಕುಡಿಯುವ ನೀರು ಮೂಲಸೌಕರ್ಯ ಕೊರತೆ ಸೇರಿ ಸಮಾಜಿಕ ಕಳಕಳಿ ಹೊಂದಿದ ಅನೇಕ ವರದಿಗಳನ್ನು ಬೀತ್ತರಿಸುವ ಮೂಲಕ ಸರಕಾರ ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದಿದ್ದಾರೆ ಇಂದಿಗೂ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುತ್ತ ಅವುಗಳಿಗೆ ಪರಿಹಾರ ಕಲ್ಪಿಸುವ ಕಾರ್ಯ ನಿರಂತರ ಮಾಡುತ್ತಿದ್ದಾರೆ. ಇವರನ್ನು ಜಿಲ್ಲಾ ಮಟ್ಟದ ಪುರಸ್ಕಾರಕ್ಕೆ ಆಯ್ಕೆ ಮಾಡಿರುವದರಿಂದ ಪಟ್ಟಣದಲ್ಲಿನ ಜನಪ್ರತಿನಿಧಿಗಳು ಹಿತ್ತೈಷಿಗಳು ಓದುಗಾರರು ಅಭಿನಂಧಿಸಿದ್ದಾರೆ.

## ಆ.8 ರಿಂದ ಸೇನಾ ನೇಮಕಾತಿ ರ್‍ಯಾಲಿ: 11 ಸಮಿತಿಗಳನ್ನು ರಚಿಸಿ ಜವಾಬ್ದಾರಿ ಹಂಚಿಕೆ ಮಾಡಿದ ಜಿಲ್ಲಾಧಿಕಾರಿಗಳು

ಯುವ ಮಾರ್ಗ ಸುದ್ದಿ

**ರಾಯಚೂರು,ಜು.24–** ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಆಗಸ್ಟ್ 8 ರಿಂದ 22ರವರೆಗೆ ನಡೆಯುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಅಂದಾಜು 15,000 ಅಭ್ಯರ್ಥಿಗಳು ಭಾಗವಹಿಸಲಿದ್ದು, ರ್‍ಯಾಲಿಯನ್ನು ಯಶಸ್ವಿಗೊಳಿಸುವ ಹಿನ್ನೆಲೆಯಲ್ಲಿ ಜಿಲ್ಲಾಮಟ್ಟದ ವಿವಿಧ ಇಲಾಖೆಗಳನ್ನೊಳಗೊಂಡು ಸಮಿತಿಗಳನ್ನು ರಚಿಸಿ ಅಧಿಕಾರಿ ಹಾಗೂ ಸಿಬ್ಬಂದಿಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಜವಾಬ್ದಾರಿ ಹಂಚಿಕೆ ಮಾಡಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಅಧ್ಯಕ್ಷತೆಯಲ್ಲಿ 10 ಜನ ಅಧಿಕಾರಿಗಳ ವೇದಿಕೆ ಸಮಿತಿ ರಚಿಸಿದ್ದು, ವೇದಿಕೆ, ಪೆಂಡಾಲ ನಿರ್ಮಾಣ, ವೇದಿಕೆ ಮುಂಭಾಗ ಆಸನ ವ್ಯವಸ್ಥೆ, ವಿದ್ಯುತ್ ದೀಪಗಳ ವ್ಯವಸ್ಥೆ, ಮೈದಾನದಲ್ಲಿ ಬ್ಯಾರಿಕೇಡ್ ವ್ಯವಸ್ಥೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ವಿದ್ಯುತ್ ದೀಪಗಳು ಮತ್ತು ಜನರೇಟರ್ ವ್ಯವಸ್ಥೆ, ಆಸನ, ಕುರ್ಚಿಗಳು, ಟೇಬಲ್‌ಗಳು, ಮೈಕ್‌ಸೆಟ್, ಖಾಟ್ ಮತ್ತು ಹಾಸಿಗೆ ಹಾಗೂ ತ್ಯಾಜ್ಯದ ತೊಟ್ಟಿಗಳ ವ್ಯವಸ್ಥೆ, ಬಿಎಸ್‌ಎನ್‌ಎಲ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಜೊತೆಗೆ ವೈಫೈ ಮತ್ತು ಟೆಲಿಫೋನ್, ಎಲ್‌ಎಎನ್ ಸಂಪರ್ಕ, ಫೈಬರ್ ಕೇಬಲ್ ಜೊತೆಗೆ ಟೆಕ್ನಿಕಲ್ ವ್ಯವಸ್ಥೆ ಕಲ್ಪಿಸುವುದು, ಸಿಸಿಟಿವಿ ಅಳವಡಿಕೆ ವ್ಯವಸ್ಥೆಯ ಜವಾಬ್ದಾರಿ ವಹಿಸಲಾಗಿದೆ.



ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಈ ಸಮಿತಿಗೆ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಭದ್ರತಾ ಸಮಿತಿ ರಚಿಸಿದ್ದು, ರ್‍ಯಾಲಿಗೆ ಆಗಮಿಸುವ ಎಲ್ಲಾ ಅಭ್ಯರ್ಥಿಗಳಿಗೆ ಹಾಗೂ ಇತರರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸುವುದು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಜನಸಂದಣಿ ನಿರ್ವಹಣೆ ಮಾಡುವುದು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಹೊರಗಡೆ ಹಾಗೂ ಮುಂಭಾಗದಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ ಸಾರ್ವಜನಿಕ ರಸ್ತೆ ಸಂಚಾರಕ್ಕೆ ತೊಂದರೆಯಾಗದಂತೆ ಕ್ರಮ ವಹಿಸುವುದು. ವಿಶ್ವವಿದ್ಯಾಲಯದ ಮುಂಭಾಗದಲ್ಲಿ ವಾಹನಗಳ ಸಂಚಾರ ದಟ್ಟಣೆ ಆಗದಂತೆ ಕ್ರಮ ವಹಿಸುವುದು ಮತ್ತು ಎಲ್ಲಾ ರೀತಿಯ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಮತ್ತು ಅಗ್ನಿಶಾಮಕ ವಾಹನ ಮತ್ತು ತುರ್ತು ಸೇವೆಗಳ ಒದಗಿಸುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ಈ ಸಮಿತಿಗೆ ಜಿಲ್ಲಾ ಪೊಲಿಸ್ ಉಪ ಅಧೀಕ್ಷಕರು ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಮೂಲಭೂತ ಸೌಕರ್ಯ ಸಮಿತಿ ರಚಿಸಲಾಗಿದ್ದು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕುಡಿಯುವ ನೀರಿಗಾಗಿ ನಳಗಳ ಮತ್ತು ನೀರಿನ ವ್ಯವಸ್ಥೆ ಒದಗಿಸುವುದು. ಸಿಬ್ಬಂದಿಗೆ ಕುಡಿಯುವ ನೀರಿನ ಬಾಟಲಿ ಕೊಡುವುದು, ಮೊಬೈಲ್ ಶೌಚಾಲಯಗಳ ವ್ಯವಸ್ಥೆ, ಅವುಗಳಿಗೆ ಟ್ಯಾಂಕರ್ ಮೂಲಕ ನೀರನ್ನು ಒದಗಿಸುವುದು, ವಿಶ್ವವಿದ್ಯಾಲಯದ ಆವರಣ ಸ್ವಚ್ಛಗೊಳಿಸುವುದು ಹಾಗೂ ಸುತ್ತಲಿನ ಪ್ರದೇಶದಲ್ಲಿನ ತ್ಯಾಜ್ಯ ವಸ್ತುಗಳ ವಿಲೇ ಮಾಡುವ ಜವಾಬ್ದಾರಿ ವಹಿಸಲಾಗಿದೆ. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ಕಾರ್ಯನಿರ್ವಾಹಕ ಅಭಿಯಂತರರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಾರಿಗೆ ಸಮಿತಿಯನ್ನು ರಚಿಸಲಾಗಿದೆ. ಸೇನಾ ನೇಮಕಾತಿ ಸಂಬಂಧ ಆಗಮಿಸುವ ಅಭ್ಯರ್ಥಿಗಳಿಗೆ ವಸತಿಗಾಗಿ ತಂಗು ಸ್ಥಳಗಳಿಂದ (ಹಾಸ್ಟೆಲ್) ಅಥವಾ ಬಸ್ **(2ನೇಪುಟಕ್ಕೆ)**

## ಸಫಾಯಿ ಕರ್ಮಚಾರಿಗಳು, ಪೌರ ಕಾರ್ಮಿಕರಿಗೆ ಅಗತ್ಯ ಸೌಕರ್ಯ ಕಲ್ಪಿಸಿ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.24–** ಜಿಲ್ಲೆಯಲ್ಲಿರುವ ಸಫಾಯಿ ಕರ್ಮಚಾರಿಗಳಿಗೆ ವಸತಿ ಸೇರಿದಂತೆ ಪುನರ್ವಸತಿ ಸೌಲಭ್ಯ ಮತ್ತು ಪೌರ ಕಾರ್ಮಿಕರಿಗೆ ಅಗತ್ಯ ಸವಲತ್ತು ಒದಗಿಸಲು ಸ್ಥಳೀಯ ಸಂಸ್ಥೆಗಳು ಕ್ರಮವಹಿಸಬೇಕು ಎಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ಸೂಚನೆ ನೀಡಿದರು.

ಗುರುವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ ಸಫಾಯಿ ಕರ್ಮಚಾರಿಗಳಿಗೆ ಸೌಲಭ್ಯ ಕೊಡುವ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು. ಕರ್ಮಚಾರಿಗಳ



ಸಂಖ್ಯೆಗೆ ಅನುಗುಣವಾಗಿ ವಸತಿ ಸೌಲಭ್ಯ ಕಲ್ಪಿಸಲು ತಮ್ಮ ವ್ಯಾಪ್ತಿಯಲ್ಲಿ ಜಾಗ ಗುರುತಿಸಿ ವರದಿ ನೀಡಬೇಕು. ಜೊತೆಗೆ ಪೌರ ಕಾರ್ಮಿಕರಿಗೂ ವಸತಿ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ಮಾಡುವ ಪೌರಕಾರ್ಮಿಕರಿಗೆ ಮೂಲಭೂತ ಸೌಕರ್ಯ ಸೇರಿದಂತೆ ಇನ್ಸೂರೆನ್ಸ್, ಸೇಫ್ಟಿಗಳನ್ನು ಧರಿಸುವಂತೆ ಅವರಿಗೆ ಮನವರಿಕೆ ಮಾಡಬೇಕು. ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶೌಚಾಲಯದ ನೀರು ಚರಂಡಿಗೆ ಬಾರದಂತೆ ಸಂಬಂಧಿಸಿದ ಅಧಿಕಾರಿಗಳು ನೋಡಿಕೊಳ್ಳಬೇಕು. ಅಂತಹ ಘಟನೆ ನಡೆದಲ್ಲಿ ಸಂಬಂಧಿಸಿದ ಮಾಲೀಕರಿಗೆ ನೋಟಿಸ್ ನೀಡಬೇಕೆಂದರು.**(2ನೇಪುಟಕ್ಕೆ)**

## ರಾಯಚೂರಲ್ಲಿ ಬಾಲ ಕಾರ್ಮಿಕ ಪತ್ತೆ: ಮಾಲೀಕನ ವಿರುದ್ಧ ಪ್ರಕರಣ ದಾಖಲು



ಯುವ ಮಾರ್ಗ ಸುದ್ದಿ

**ರಾಯಚೂರು,ಜು.24–** ಮಕ್ಕಳ ಸಹಾಯವಾಣಿಗೆ ಬಂದ ದೂರಿನ ಅನ್ವಯ ಟಾಸ್ಕ್ ಪೋರ್ಸ್ ಸಮಿತಿ ತಂಡದೊಂದಿಗೆ ರಾಯಚೂರಿನ ಮಡ್ಡಿಪೇಟೆಯ ಶ್ರೀ ವೀರಭದ್ರೇಶ್ವರ ಆಯಿಲ್ ಮರ್ಚೆಂಟ್ಸ್, (ಗಾಣದ ಮರ್ಚೆಂಟ್ಸ್) ಮೇಲೆ ಹಠಾತ್‌ದಾಳಿ ಕೈಗೊಂಡು ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ ಒಬ್ಬ ಅಪ್ರಾಪ್ತ ವಯಸ್ಸಿನ ಮಗುವನ್ನು ರಕ್ಷಣೆ ಮಾಡಿ ರಾಯಚೂರಿನ ಸರ್ಕಾರಿ ಬಾಲಕರ ಬಾಲಮಂದಿರ ಒಪ್ಪಿಸಲಾಗಿದೆ.

ಮಗುವನ್ನು ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದ ಮಾಲೀಕರ ವಿರುದ್ಧ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ ನಗರದ ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ, ರಾಯಚೂರಿನ 1ನೇ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್ ಘನಿ, ರಾಯಚೂರಿನ ಕ್ಷೇತ್ರ ಶಿಕ್ಷಣಾಧಿ ಕಾರಿಗಳ ಕಾರ್ಯಾಲಯದ ಬಿ.ಆರ್.ಪಿ ಹರೀಶ್, ಗ್ರಾಮ ಆಡಳಿತ ಅಧಿಕಾರಿ ಮಂಜುನಾಥ, ಮಕ್ಕಳ ಸಹಾಯವಾಣಿ ಘಟಕದ ವಿಷಯ ನಿರ್ವಾಹಕ ಮಹೇಶ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಔಟ್‌ರೀಚ್ ವರ್ಕರ್ ದಿನೇಶ ಸೇರಿದಂತೆ ಇತರರು ದಾಳಿ ನಡೆಸಿದ್ದರು.

**ಜಾಗೃತಿ:** ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50 ಸಾವಿರ ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗೆ ಅಕ್ರಮ ಮತ್ತು ಕಾನೂನು ಬಾಹಿರವಾಗಿ ಸಾಗಾಣಿಕೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿಗೆ ಕರೆ ಮಾಡಲು ಕೋರಿದರು.

## ರಸ್ತೆಗಳ ಮೇಲೆ ಅನಧಿಕೃತ ಕಾಮಗಾರಿ ನಿರ್ಮಾಣ ತಡೆಯಲು ನಮ್ಮ ಕರ್ನಾಟಕ ಸೇನೆ ಒತ್ತಾಯ

ಯುವ ಮಾರ್ಗ ಸುದ್ದಿ

**ಅರಕೇರಾ,ಜು.24–**ಇತ್ತಿಚೆಗೆ ನಿರ್ಮಾಣವಾದ ರಸ್ತೆಗಳ ಮೇಲೆ ಅನಧಿಕೃತ ಕಾಮಗಾರಿಗಳನ್ನು ಮಾಡುವ ಮೂಲಕ ರಸ್ತೆಗಳನ್ನು ಹದಗೆಡಿಸಲಾಗುತ್ತಿದೆ ಎಂದು ನಮ್ಮ ಕರ್ನಾಟಕ ಸೇನೆ ಪದಾಧಿಕಾರಿಗಳು ಆರೋಪಿಸಿದರು.

ಪಟ್ಟಣದಲ್ಲಿ ತಹಸೀಲ್ದಾರ್ ಅಮರೇಶ ಬಿರಾದರಗೆ ಗುರುವಾರ ಮನವಿ ಸಲ್ಲಿಸಿದರು. ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ನಾಯಕ ಪಡಗಿನದೊಡ್ಡಿ ಮಾತನಾಡಿ, ದೇವದುರ್ಗ ಮತ್ತು ಅರಕೇರಾ ತಾಲೂಕು ವ್ಯಾಪ್ತಿಯಲ್ಲಿ ನಿರ್ಮಾಣವಾದ ರಸ್ತೆಗಳ ಮೇಲೆ ಜಿಯೋ ಕೇಬಲ್, ಕೆರೆ ನಿರ್ಮಾಣಕ್ಕೆ ಪೈಪ್ ಲೈನ್, ಜೆಜೆಎಂ ಜಲಧಾರೆ ಯೋಜನೆಯ ಪೈಪ್‌ಲೈನ್ ಕಾಮಗಾರಿಗಳನ್ನು ಮಾಡುತ್ತಿದ್ದು, ರಸ್ತೆ ಎಡ ಮತ್ತು ಬಲ ಭಾಗದ ರಸ್ತೆಭುಜಗಳನ್ನು ಅವೈಜ್ಞಾನಿಕವಾಗಿ ಅಗೆಯಲಾಗುತ್ತಿದೆ. ನೂರಾರು ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ರಸ್ತೆಗಳನ್ನು ನಿಯಮ ಉಲ್ಲಂಘಿಸಿ ಮನಬಂದಂತೆ ಅಗೆದು ಮುಚ್ಚುತ್ತಿದ್ದಾರೆ. ಇದರಿಂದ ರಸ್ತೆಗಳು ತಮ್ಮ ಗುಣಮಟ್ಟ ಕಾಪಾಡಿಕೊಳ್ಳಲು ಹೇಗೆ ಸಾಧ್ಯವಾಗುತ್ತದೆ ಎಂದು ದೂರಿದರು.



ವಿವಿಧ ಕಾಮಗಾರಿಗಳನ್ನು ಕೂಡಲೇ ನಿಲ್ಲಿಸುವಂತೆ ಸೂಚಿಸಿ ಆಯಾ ಇಲಾಖೆಗಳ ಮೂಲಕ ನಿಯಮಾನುಸಾರವಾಗಿ ರಸ್ತೆಯಿಂದ 15 ಮೀಟರ್ ಬಿಟ್ಟು ಆಳವಡಿಸಬೇಕು. ರಸ್ತೆಯ ಮೇಲೆ ಪೈಪುಗಳನ್ನು ಪಾಕುವುದರಿಂದ ಪಾದಾಚಾರಿ, ದ್ವಿಚಕ್ರ ವಾಹನ, ಕಾರು, ಬಸ್ಸುಗಳ ಮತ್ತು ಭಾರೀ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತದೆ. ಅಲ್ಲದೇ ಎಷ್ಟೋ ಜನ ದ್ವಿಚಕ್ರವಾಹನ ಸವಾರರು ಅಪಘಾತಗಳು ಮಾಡಿಕೊಂಡು ಆಸ್ಪತ್ರೆಗೆ ಸೇರಿ ಸುಮ್ಮನೆ ಮನೆಗೆ ಹೋಗಬೇಕಾಗಿದೆ. ಈ ರಸ್ತೆಯ ಅಕ್ರಮ ಕಾಮಗಾರಿಯ ಕುರಿತು ಯಾವ ಇಲಾಖೆಗೆ ದೂರು ಸಲ್ಲಿಸಬೇಕೆಂಬುದು ಸಾರ್ವಜನಿಕರಿಗೆ ಅರ್ಥವಾಗದಂತಾಗಿದೆ ಎಂದರು.

ಅಲ್ಲದೇ ರಾಯಚೂರು–ತಿಂಥಣಿ ಮತ್ತು ದೇವದುರ್ಗ–ಅರಕೇರಾ–ಸಿರವಾರ ರಸ್ತೆ ಕೆ.ಆರ್.ಡಿ.ಸಿ.ಎಲ್. ವತಿಯಿಂದ ಕಾಮಗಾರಿ ನಿರ್ಮಾಣವಾಗಿದೆ. ಜಿಯೋ ಮತ್ತು ಜೆಜೆಎಂ ಜಲಧಾರೆ ಯೋಜನೆಯ ಪೈಪ್ ಅಳವಡಿಸಲು ಯಾವ ರೀತಿ ಅನುಮತಿ ನೀಡಿದ್ದಾರೆಂಬುದು ಖಚಿತವಾಗಬೇಕಿದೆ ಎಂದರು.

ಜಿಲ್ಲಾಧ್ಯಕ್ಷ ಕೊಂಡಪ್ಪ ಕೆ, ಪದಾಧಿಕಾರಿಗಳಾದ ಭೀಮನಗೌಡ ಎಂ ಪಾಟೀಲ್, ವೆಂಕಟೇಶ ಗುತ್ತೆದಾರ ಇತರರಿದ್ದರು.

## ಮೊದಲನೇಯ ಪುಟದಿಂದ

# ಸಫಾಯಿ ಕರ್ಮಚಾರಿಗಳು, ಪೌರ ಕಾರ್ಮಿಕರಿಗೆ ಅಗತ್ಯ ಸೌಕರ್ಯ ಕಲ್ಪಿಸಿ

ಪೌರಕಾರ್ಮಿಕರಿಗೆ ಕೌಶಲ್ಯಾಧಾರಿತ ತರಬೇತಿ ನೀಡಬೇಕು. ಬೇರೆ-ಬೇರೆ ಕೆಲಸಗಳತ್ತ ಅವರು ಗಮನಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳು ನ್ಯಾಯ ವ್ಯವಸ್ಥೆ ರೂಪಿಸಬೇಕು. ಪೌರಕಾರ್ಮಿಕರಿಗೆ ಆಯುಷ್ಮಾನ ಭಾರತ ಕಾರ್ಡ್ ಒದಗಿಸಿ ಸರ್ಕಾರದ ನಿರ್ದೇಶನದಂತೆ ವಾರ್ಷಿಕ 5 ಲಕ್ಷ ರೂ.ಗಳ ಉಚಿತ ಚಿಕಿತ್ಸೆ ಪಡೆದುಕೊಳ್ಳಲು ಅನುಕೂಲ ಕಲ್ಪಿಸಬೇಕು.

ಕಡ್ಡಾಯವಾಗಿ ಶೇ. 24.10 ಅನುದಾನದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರಿಗೂ ಆರೋಗ್ಯ ಭತ್ಯೆ ನೀಡಲು ಕ್ರಮವಹಿಸಬೇಕು. ಹಾಗೂ ಅವರ ಮಕ್ಕಳ ವಿದ್ಯಾಭ್ಯಾಸಕ್ಕೆ ತಗಲುವ ವೆಚ್ಚವನ್ನು ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೇರಪಾವತಿಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ವಾಸಿಸಲು ಮನೆಗಳನ್ನು ಕಲ್ಪಿಸಿಕೊಡಬೇಕು. ನೇರಪಾವತಿ ಹಾಗೂ ಹೊರಗುತ್ತಿಗೆ ಪೌರಕಾರ್ಮಿಕರಿಗೆ ಮತ್ತು ವಸತಿರಹಿತ ಕಾರ್ಮಿಕರಿಗೆ ಆಶ್ರಯ ಯೋಜನೆಯಡಿಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲು ಅಗತ್ಯ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೇರ ಪಾವತಿ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಸ್ವಚ್ಛತಾ, ಕನಿಷ್ಠ ವೇತನ, ಇ.ಎಸ್.ಐ, ಪಿ.ಎಫ್ ಮತ್ತು ವೇತನ ಚೀಟಿ, ಇನ್ಸುರೆನ್ಸ್ ಕಡ್ಡಾಯ ಮಾಡಬೇಕು. ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಪೌರಕಾರ್ಮಿಕರು, ಸ್ಕಾವೆಂಜರ್ ಮಕ್ಕಳಿಗೆ ಪ್ರವೇಶ ಪರೀಕ್ಷೆ ಇಲ್ಲದೆ ಪ್ರವೇಶಾತಿ ಕಲ್ಪಿಸಲು ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು

ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಮಾತನಾಡಿ, ಪೌರಕಾರ್ಮಿಕರಿಗೆ ಮೂಲಭೂತ ಸೌಕರ್ಯಗಳು ಸೇರಿದಂತೆ ಹಲವಾರು ಸೌಲಭ್ಯಗಳನ್ನು ಈಗಾಗಲೇ ಒದಗಿಸಲಾಗಿದ್ದು, ಅವುಗಳನ್ನು ಬಳಕೆ ಮಾಡುವಂತೆ ಜಾಗೃತಿ ಮೂಡಿಸಲಾಗುವುದು. ಪಾಲಿಕೆಯಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸಿಕೊಂಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಕುಟುಂಬದವರೊಂದಿಗೆ ನೇರ ಸಂವಾದ: ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಗೆ ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು, ಪೌರ ಕಾರ್ಮಿಕರು ಮತ್ತು ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮತ್ತು ಮೃತಪಟ್ಟ ಮಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದವರೊಂದಿಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ನೇರ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಂಡು ಹತ್ತಾರು ಸಮಸ್ಯೆಗಳನ್ನು ಆಲಿಸಿದರು. ಸ್ಥಳದಲ್ಲೇ ಬಗ್ಗೆಹರಿಯುವಂತ ಸಮಸ್ಯೆಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಬಗೆಹರಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಆಯುಕ್ತರಾದ ಮಹಾದೇವಸ್ವಾಮಿ, ಜಿಲ್ಲಾ ಪಂಚಾಯತಿಯ ಸಹಾಯಕ ಕಾರ್ಯದರ್ಶಿಗಳಾದ ಬಿ.ವೈ.ವಾಲ್ಮೀಕಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂರು, ರಾಯಚೂರು ನಗರಾಭೀವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ ಎಂ.ಎಸ್, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ಆ.8 ರಿಂದ ಸೇನಾ ನೇಮಕಾತಿ ರ್‍ಯಾಲಿ: 11 ಸಮಿತಿಗಳನ್ನು ರಚಿಸಿ ಜವಾಬ್ದಾರಿ ಹಂಚಿಕೆ ಮಾಡಿದ ಜಿಲ್ಲಾಧಿಕಾರಿಗಳು

ನಿಲ್ದಾಣಗಳಿಂದ ರ್‍ಯಾಲಿ ನಡೆಯುವ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಬಸ್‌ಗಳ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಈ ಸಮಿತಿಗೆ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಆಹಾರ ಹಾಗೂ ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸೇನಾ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ವಸತಿ ಮತ್ತು ಆಹಾರ ಸಮಿತಿ ರಚಿಸಲಾಗಿದೆ. ಸೇನಾ ನೇಮಕಾತಿ ರ್‍ಯಾಲಿಗೆ ಆಗಮಿಸುವ ಅಭ್ಯರ್ಥಿಗಳಿಗೆ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಅರಕೇರಾ ತಹಶೀಲ್ದಾರರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಅಧ್ಯಕ್ಷತೆಯಲ್ಲಿ ಸೇನಾ ಸಿಬ್ಬಂದಿಗೆ ವಸತಿ ಸಮಿತಿ ರಚಿಸಲಾಗಿದೆ. ಈ ರ್‍ಯಾಲಿಯಲ್ಲಿ ಭಾಗವಹಿಸುವ ಸೇನಾ ಸಿಬ್ಬಂದಿಗೆ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಮಾಜಿ ಸೈನಿಕರಾದ ಚನ್ನರೆಡ್ಡಿ ಅವರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆರೋಗ್ಯ ಸಮಿತಿಯನ್ನು ರಚಿಸಲಾಗಿದ್ದು, ವೈದ್ಯರು ಮತ್ತು ಶುಶ್ರೂಷ ಸಹಾಯಕಿಯರ ಸಿಬ್ಬಂದಿಯನ್ನು ಅಗತ್ಯಕ್ಕೆ ಅನುಗುಣವಾಗಿ ನಿಯೋಜಿಸುವುದು. ಅವಶ್ಯಕ ಹಾಗೂ ಜೀವರಕ್ಷಕ ಔಷಧಿಗಳ ವ್ಯವಸ್ಥೆ ಒದಗಿಸುವುದು. ದಿನವಿಡಿ ಆರೋಗ್ಯ ಸೇವೆ ಒದಗಿಸುವುದು. ಬೆಳಿಗ್ಗೆ 05 ರಿಂದ ದಿನದ ಕಾರ್ಯಕ್ರಮ ಪೂರ್ವವಾಗುವವರೆಗೂ ಎಲ್ಲಾ ಸೌಲಭ್ಯದೊಂದಿಗೆ ಅಂಬುಲೈನ್ಸ್ ವಾಹನ ಸಿದ್ಧವಾಗಿಟ್ಟುಕೊಳ್ಳುವುದು. ಆಹಾರ ಗುಣಮಟ್ಟ ಪರಿಶೀಲನೆ ಮಾಡುವ ಜವಾಬ್ದಾರಿ ವಹಿಸಲಾಗಿದೆ. ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿಗಳು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಪ್ರಚಾರ ಮತ್ತು ಮಾಧ್ಯಮ ಸಮಿತಿಯನ್ನು ರಚಿಸಲಾಗಿದೆ. ಪ್ರತಿ ದಿನ ರ್‍ಯಾಲಿಯಲ್ಲಿ ನಡೆಯುವ ಮಾಹಿತಿಯನ್ನು ಕಲೆ ಹಾಕುವುದು ಮತ್ತು ವಾರ್ತಾ ಇಲಾಖೆಗೆ ಒದಗಿಸುವುದು ಮತ್ತು ಅಭ್ಯರ್ಥಿಗಳ ಅನುಕೂಲಕ್ಕಾಗಿ ರ್‍ಯಾಲಿಯಲ್ಲಿ ನಡೆಯುವ ಮಾಹಿತಿಯನ್ನು ಎಲ್ಲಾ ಪ್ರಮುಖ ಪತ್ರಿಕೆಗಳಲ್ಲಿ ಪ್ರಚುರಪಡಿಸುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಮತ್ತು ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಮಿತಿಯ ಸದಸ್ಯರಾಗಿದಾರೆ.ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಅಧ್ಯಕ್ಷತೆಯಲ್ಲಿ ಮತ್ತು ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಸದಸ್ಯ ಕಾರ್ಯದರ್ಶಿಯನ್ನಾಗಿ ವಿದ್ಯುತ್ ಸರಬರಾಜು ಸಮಿತಿ ರಚಿಸಿದ್ದು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಲ್ಲಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿ ಮುಗಿಯುವವರೆಗೆ ಯಾವುದೇ ರೀತಿ ವಿದ್ಯುತ್ ವ್ಯತ್ಯಯ ಆಗದ ರೀತಿಯಲ್ಲಿ ಸೂಕ್ತ ವ್ಯವಸ್ಥೆ ಮಾಡುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ.ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ದಾಖಲಾತಿ ಪರಿಶೀಲನಾ ಸಮಿತಿ ರಚಿಸಲಾಗಿದೆ. ರ್‍ಯಾಲಿಯಲ್ಲಿ ಅಭ್ಯರ್ಥಿಗಳು ಸಲ್ಲಿಸುವ ದಾಖಲಾತಿಗಳನ್ನು ಪಡೆದು ಅವುಗಳನ್ನು ಪರಿಶೀಲಿಸಿ ಸಂಬಂಧಪಟ್ಟ ಸೇನಾ ಸಿಬ್ಬಂದಿಗೆ ವರದಿ ನೀಡುವ ಜವಾಬ್ದಾರಿ ವಹಿಸಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದಾರೆ. ರಾಯಚೂರು ತಹಶೀಲ್ದಾರರು, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಈ ಸಮಿತಿಯ ಸದಸ್ಯರಾಗಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆ ಸಂತೋಷ ರಾಣಿ ಅವರ ಅಧ್ಯಕ್ಷತೆಯಲ್ಲಿ ಸ್ವಚ್ಛತಾ ಸಮಿತಿ ರಚಿಸಲಾಗಿದೆ. ಮಹಾನಗರ ಪಾಲಿಕೆಯ ಪರಿಸರ ಅಭಿಯಂತರರು ಮತ್ತು ಮಹಾನಗರ ಪಾಲಿಕೆ ನೈರ್ಮಲ್ಯ ನಿರೀಕ್ಷಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ಸದಸ್ಯರಾಗಿದ್ದಾರೆ. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿ ಮುಗಿಯುವವರೆಗೆ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಸಿಬ್ಬಂದಿಯನ್ನು ನಿಯೋಜಿಸಿ ಸೂಕ್ತ ವ್ಯವಸ್ಥೆ ಮಾಡಲು ಈ ಸಮಿತಿಗೆ ಜವಾಬ್ದಾರಿ ವಹಿಸಲಾಗಿದೆ.

ನೋಡಲ್ ಅಧಿಕಾರಿಯಾಗಿ ನೇಮಕ: ಈ ಸೇನಾ ನೇಮಕಾತಿ ರ್‍ಯಾಲಿಯ ಮೇಲ್ವಿಚಾರಣೆಗಾಗಿ ಉಪವಿಭಾಗಾಧಿಕಾರಿಗಳು, ರಾಯಚೂರು ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ಮತ್ತು ರಾಯಚೂರು ತಹಶೀಲ್ದಾರರು ಹಾಗೂ ಅರಕೇರಾ ತಹಶೀಲ್ದಾರನ್ನು ಇವರನ್ನು ಲೈಸನಿಂಗ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.ಸಮಿತಿಯ ಅಧ್ಯಕ್ಷರಿಗೆ ಸೂಚನೆ: ವಿವಿಧ ಸಮಿತಿಗಳ ಅಧ್ಯಕ್ಷರು ರಾಯಚೂರಿನ ಉಪವಿಭಾಗಾಧಿಕಾರಿಗಳೊಡನೆ ಸಮನ್ವಯ ಸಾಧಿಸಿ ತಮ್ಮ ಸಮಿತಿಗೆ ವಹಿಸಲಾದ ಕಾರ್ಯಗಳ ಕುರಿತು ಕೂಡಲೇ ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

**ಅಧಿಕಾರಿಗಳಿಗೆ ಸೂಚನೆ:** ಈ ಸೇನಾ ನೇಮಕಾತಿ ರ್‍ಯಾಲಿಯು ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ರಚಿಸಲಾದ ವಿವಿಧ ಸಮಿತಿಯಲ್ಲಿ ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿ ಮತ್ತು ಸದಸ್ಯರಾಗಿರುವ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಯು ತಮಗೆ ವಹಿಸಲಾದ ಕಾರ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

# ಜುಲೈ 25ರಿಂದ 27ರವರೆಗೆ ಆನ್‌ಲೈನ್ ಸೇವೆ ಅಲಭ್ಯ

**ರಾಯಚೂರು ಜುಲೈ 24 (ಕರ್ನಾಟಕ ವಾರ್ತೆ):** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪವಿಭಾಗ-1 ಮತ್ತು 2 ರಲ್ಲಿ ನಗರದ ಆರ್‌ಎಪಿಡಿಆರ್‌ಪಿ ನಲ್ಲಿ ಒಳಪಡುವ ಪ್ರದೇಶದಲ್ಲಿ ಜುಲೈ 25ರಿಂದ 27ರವರೆಗೆ ವಿದ್ಯುತ್‌ಗೆ ಸಂಬಂಧಿಸಿದ ಯಾವುದೇ ಆನ್‌ಲೈನ್ ಸೇವೆಗಳು ಲಭ್ಯವಿರುವುದಿಲ್ಲ. ಕಾರಣ ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ನಿರಂತರ ಸೇವಾ ಕೇಂದ್ರದ ಸಂಖ್ಯೆ: 08532-226386, 08532-231999ಗೆ ಸಂಪಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪವಿಭಾಗ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವಮಾನವ ಕುವೆಂಪು ಸದ್ಭಾವನ ರಾಷ್ಟ್ರೀಯ ಪ್ರಶಸ್ತಿಗೆ ಮಲ್ಲಿಕಾರ್ಜುನ ಬಿ.ಗಣೇಕಲ್ ಆಯ್ಕೆ

ಯುವ ಮಾರ್ಗ ಸುದ್ದಿ



**ಅರಕೇರಾ,ಜು.24–** ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಜು.27 ರಂದು ದರ್ಶನ್ ಸೋಶಿಯಲ್ ಅಂಡ್ ಕಲ್ಚರಲ್ ಅಕಾಡೆಮಿ (ರಿ) ಬೆಂಗಳೂರುರವರು ಸರ್ವ ಜನಾಂಗದ ಶಾಂತಿಯ ತೋಟ ಕಾರ್ಯಕ್ರಮದ ಅಡಿಯಲ್ಲಿ 'ನೃತ್ಯ ಪರ್ವ' ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ವಿಶ್ವಮಾನವ ಕುವೆಂಪು ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರ ವಿಸಲಾಗುತ್ತಿದೆ.

ಈ ಪ್ರಶಸ್ತಿಗೆ ರಾಯಚೂರು ಜಿಲ್ಲೆಯ ಅರಕೇರಾ ತಾಲೂಕಿನ ಬಿ.ಗಣೇಕಲ್ ಗ್ರಾಮದ ನಿವಾಸಿಯಾದ ಮಲ್ಲಿಕಾರ್ಜುನ ಬಿ. ಗಣೇಕಲ್ ಇವರು ವಿಕಲಚೇತನರಾಗಿದ್ದು, ವಿಕಲಚೇತನರಿಗೆ ಅನೇಕ ಸರ್ಕಾರ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಮತ್ತು ಸಮಾಜ ಸೇವೆ ಮಾಡುತ್ತಿರುವ ಇವರನ್ನು ಗುರುತಿಸಿದ ಬೆಂಗಳೂರಿನ ಪ್ರತಿಷ್ಠಿತ ಅಕಾಡೆಮಿಯಾದ ದರ್ಶನ್ ಸೋಶಿಯಲ್ ಅಂಡ್ ಕಲ್ಬರಲ್ ಅಕಾಡೆಮಿಯ ಅಧ್ಯಕ್ಷರಾದ ದರ್ಶನ್ ಯು ರವರು ಇವರನ್ನು ಗುರುತಿಸಿ ವಿಶ್ವಮಾನವ ಕುವೆಂಪು ಸದ್ಭಾವನ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.ಈ ಪ್ರಶಸ್ತಿಯನ್ನು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ವಿಶ್ವಮಾನವ ಕುವೆಂಪು ಸದ್ಭಾವನೆ ರಾಷ್ಟ್ರೀಯ ಪ್ರಶಸ್ತಿ ಯನ್ನು ನೀಡಿ ಗೌರವಿಸಲಾಗುತ್ತದೆ ಎಂದು ತಿಳಿಸಿದರು.

ಸರ್ವ ಜನಾಂಗದ ಶಾಂತಿಯ ತೋಟ ಕಾರ್ಯ ಕ್ರಮದ ಅಡಿಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಜಕಾರಣಿಗಳು, ಕನ್ನಡ ಚಲನಚಿತ್ರ ನಟ ನಟಿಯರು, ಕವಿ, ಸಾಹಿತಿಗಳು ಹಾಗೂ ಸಮಾಜದ ಗಣ್ಯರು ಉಪಸ್ಥಿತರಿರುತ್ತಾರೆ.

# ಗಾರಲದಿನ್ನಿ ಗ್ರಾಮದ ಹುಲಿಗೆಮ್ಮ ಕಾಣೆ: ಪತ್ತೆಗೆ ಯರಗೇರಾ ಪೊಲೀಸರ ಮನವಿ

ಯುವ ಮಾರ್ಗ ಸುದ್ದಿ



**ರಾಯಚೂರು,ಜು.24–** ತಾಲೂಕಿನ ಯರಗೇರಾ ಪೊಲೀಸ್ ಠಾಣಾ ವ್ಯಾಪ್ತಿಯ ಗಾರಲದಿನ್ನಿ ಗ್ರಾಮದ ನಿವಾಸಿ ಹುಲಿಗೆಮ್ಮ ಗಂಡ ಶ್ರೀನಿವಾಸ (27) ಎಂಬ ಮಹಿಳೆಯು 8 ವರ್ಷಗಳಾದರೂ ಮಕ್ಕಳಾಗದೇ ಇರುವುದರಿಂದ ಮನಸಿಗೆ ಬೇಜಾರು ಮಾಡಿಕೊಂಡು ಜುಲೈ 12ರ ಮಧ್ಯಾಹ್ನ 1.30ಕ್ಕೆ ಸುಮಾರಿಗೆ ಮನೆಯಿಂದ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಯರಗೇರಾ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ: 112/ 2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ಮಹಿಳೆಯ ಚಹರೆ: ವಯಸ್ಸು 27, ಜಾತಿ ಉಪ್ಪಾರ, ಗೋಧಿ ಮೈಬಣ್ಣ, ದುಂಡನೆಯ ಮುಖ, ಉದ್ದ ನೆಯ ಮೂಗು, ಸಾಧಾರಣ ಮೈಕಟ್ಟು, ಗೋಧಿ ಬಣ್ಣದ ಚೂಡಿದಾರ ಬಟ್ಟೆಗಳನ್ನು ಧರಿಸಲಾಗಿದ್ದು, 10ನೇ ತಗರತಿ ವಿದ್ಯಾರ್ಹತೆ ಪಡೆದಿದ್ದು, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾಳೆ. ಈ ಮಹಿಳೆ ಬಗ್ಗೆ ಸುಳಿವು ಸಿಕ್ಕಲ್ಲಿ ಯರಗೇರಾ ಪೊಲೀಸ್ ಠಾಣೆಯನ್ನು ಸಂಪರ್ಕ ಮಾಡುವಂತೆ ಯರಗೇರಾ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಕಾನೂನು ಪದವಿ ಭತ್ಯೆಗೆ ಅರ್ಜಿ ಆಹ್ವಾನ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.24–**ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಕಾನೂನು ಪದವಿ ಪಡೆದಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ತರಬೇತಿ ಭತ್ಯೆ ನೀಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ 3.50 ಲಕ್ಷ ರೂ. ಮೀರಿರಬಾರದು. ಅಭ್ಯರ್ಥಿಯು ಬಾರ್ ಕೌನ್ಸಿಲಿಂಗ್‌ನಲ್ಲಿ ಹೆಸರನ್ನು ನೋಂದಾಯಿಸಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 30 ವರ್ಷದೊಳಗಿರಬೇಕು ಮತ್ತು ಅರ್ಜಿ ಸಲ್ಲಿಸಲುವ ಕೊನೆಯ ದಿನಾಂಕಕ್ಕೆ ಕಾನೂನು ಪದವಿ ಪೂರ್ಣಗೊಳಿಸಿ 2 ವರ್ಷವಾಗಿರಬೇಕು.

ಅಭ್ಯರ್ಥಿಗಳು ಸಲ್ಲಿಸುವ ಮಾಹೆಯಾನ ದಿನಚರಿಯನ್ನು ಪರಿಶೀಲಿಸಿ ತರಬೇತಿ ಭತ್ಯೆಯನ್ನು ಮಂಜೂರು ಮಾಡಲಾಗುವುದು. ಅಭ್ಯರ್ಥಿಯು ತರಬೇತಿಯನ್ನು ಮಧ್ಯೆದಲ್ಲಿ ಬಿಡುವಂತಿಲ್ಲ. ಈ ಬಗ್ಗೆ ಒಂದು ಮುಚ್ಚಳಿಕೆ ಪತ್ರ ನೀಡಬೇಕು. ಒಂದು ವೇಳೆ ಸರ್ಕಾರಿ ಉದ್ಯೋಗ ದೊರಕಿದಲ್ಲಿ ಅಥವಾ ನ್ಯಾಯಾಧೀಶರಾಗಿ ನೇಮಕಾತಿ ಹೊಂದಿದಲ್ಲಿ ಜಿಲ್ಲಾ ಸಮಿತಿಯ ಗಮನಕ್ಕೆ ತಂದು ತರಬೇತಿ ಬಿಡಬಹುದು ಹಾಗೂ ವಿಶೇಷ ಸಂದರ್ಭದಲ್ಲಿ ಬಿಡಬೇಕಾದಲ್ಲಿ ಸರ್ಕಾರದ ಅನುಮತಿ ಪಡೆಯಬೇಕು.

ದಾಖಲಾತಿಗಳ ವಿವರ: ನಿಗದಿತ ನಮೂನೆಯಲ್ಲಿ ಅರ್ಜಿ, ತಹಶೀಲ್ದಾರರಿಂದ ಪಡೆದ ಆದಾಯ ಮತ್ತು ಜಾತಿ ಪ್ರಮಾಣ ಪತ್ರ (ಧೃಡೀಕೃತ ಪ್ರತಿ), ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಸ್ವಯಂ ದೃಢೀಕೃತ 2 ಭಾವಚಿತ್ರ, ಕಾನೂನು ಪದವಿಯ ಅಂಕ ಪಟ್ಟಿ (ದೃಡೀಕೃತ ಪ್ರತಿ), ಬಾರ್ ಕೌನ್ಸಿಲಿಂಗ್‌ನಲ್ಲಿ ಹೆಸರನ್ನು ನೋಂದಾಯಿಸಿದ ಪ್ರತಿಯೊಂದಿಗೆ ಅಭ್ಯರ್ಥಿಗಳು ಗೂಗಲ್ ಫಾರಂ ವೆಬ್‌ಸೈಟ್ https://forms.gle/P52Q9gGV2hqS9hy6A ನಲ್ಲಿ ಆಗಸ್ಟ್ 08ರ ಸಂಜೆ 5 ಗಂಟೆಯೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಜಿಲ್ಲೆಯಲ್ಲಿ ಮೂರು ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಇದರಲ್ಲಿ ಎರಡು ಅಭ್ಯರ್ಥಿ ಮುಸ್ಲಿಂ ಹಾಗೂ ಇನ್ನೊಬ್ಬ ಅಭ್ಯರ್ಥಿಯನ್ನು ಇತರೆ ಅಲ್ಪಸಂಖ್ಯಾತರ ಸಮುದಾಯದಿಂದ ಆಯ್ಕೆ ಮಾಡಲಾಗುವುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಿತ್ರ ಸುದ್ದಿ



**ಸಿರವಾರ,ಜು.24– ಸಿರವಾರ ಪಟ್ಟಣದ ರೈತಪರ ಚಿಂತಕರು, ಪರಿಸರ ಪ್ರೇಮಿಗಳಾದ ಎನ್. ಉದಯಕುಮಾರ್ ಸಾಹುಕಾರ್ ಅವರ ಹುಟ್ಟು ಹಬ್ಬದ ನಿಮಿತ್ಯ ಪಟ್ಟಣದ ಮುಖ್ಯ ರಸ್ತೆಯ ವಿಭಜಕದ ಉದ್ದಕ್ಕೂ ಸಸಿ ನೆಟ್ಟು ನೀರು ಹಾಕುವ ಮೂಲಕ ಹುಟ್ಟು ಹಬ್ಬವನ್ನು ವಿಶೇಷವಾಗಿ ಆಚರಿಸಲಾಯಿತು.**

**ಈ ಸಂದರ್ಭದಲ್ಲಿ ಎನ್. ಉದಯಕುಮಾರ್ ಸಾಹುಕಾರ್, ಅರಕೇರಿ ಶಿವಶರಣ ಸಾಹುಕಾರ್, ಜಿ.ವಿರೇಶ ಸಾಹುಕಾರ್, ಪ್ರಕಾಶ್ ಪಾಟೀಲ್, ಶ್ರೀಧರಸ್ವಾಮಿ, ನಾಗೇಶ್ ನಾಯಕ, ವೆಂಕಟೇಶ್ ದೊರೆ, ಪರಶುರಾಮ್ ಸರೋದೇ, ಮಲ್ಲಪ್ಪ ಕಡದಿನ್ನಿ, ಚನ್ನಪ್ಪ ಗಡ್ಲ, ಮೇಷಕ್ ದೊಡ್ಡಮನೆ, ರಾಜ, ಶಾಂತಪ್ಪ ಪಿತ್ಗಲ್ ಸೇರಿದಂತೆ ಅನೇಕರು ಇದ್ದರು.**

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

# ರೇಣುಕಾಸ್ವಾಮಿ ಹತ್ಯೆ ಪ್ರಕರಣ: ದರ್ಶನ್ 10 ದಿನ ನಿರಾಳ

**ಬೆಂಗಳೂರು,ಜು.24–**ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ನೀಡಿರುವ ಜಾಮೀನು ರದ್ದು ಕೋರಿ ನಗರ ಪೊಲೀಸರು ಸಲ್ಲಿಸಿರುವ ಮೇಲ್ಮನವಿ ಅರ್ಜಿಯ ವಿಚಾರಣೆಯನ್ನು ಇಂದು ನಡೆಸಿದ ಸುಪ್ರೀಂ ಕೋರ್ಟ್ ತೀರ್ಪು ಕಾಯ್ದಿರಿಸಿದೆ.

ನಟ ದರ್ಶನ್ ಮತ್ತವರ ಗ್ಯಾಂಗ್‌ನಿಂದ ನಡೆದಿದ್ದ ರೇಣುಕಾಸ್ವಾಮಿ ಬರ್ಬರ ಕೊಲೆ ಪ್ರಕರಣದಲ್ಲಿ ದರ್ಶನ್ ಹಾಗೂ ಮತ್ತಿತರರ ಪರ ವಾದ ಮಂಡನೆ ಮುಕ್ತಾಯವಾಗಿದ್ದು, ವಾದ, ಪ್ರತಿವಾದ ಆಲಿಸಿ ಸುಪ್ರೀಂ ಕೋರ್ಟ್ ಆದೇಶ ಕಾಯ್ದಿರಿಸಿ ಲಿಖಿತ ವಾದಾಂಶಗಳನ್ನು ಒಂದು ವಾರ'ದೊಳಗೆ 3 ಪುಟಗಳಲ್ಲಿ ಸಲ್ಲಿಸಬೇಕು ಎಂದು ಸೂಚನೆ ನೀಡಿದೆ.

ಇದರಿಂದಾಗಿ ದರ್ಶನ್ ಮತ್ತು ಗ್ಯಾಂಗ್‌ಗೆ 10 ದಿನಗಳ ಕಾಲ ತಾತ್ಕಾಲಿಕ ರಿಲೀಫ್ ದೊರೆತಿದೆ. ಕನಿಷ್ಟ 10 ದಿನಗಳ ಬಳಿಕವಷ್ಟೇ ದರ್ಶನ್ ಜಾಮೀನಿಗೆ ಸಂಬಂಧಿಸಿ ತೀರ್ಪು ಬರಲಿದೆ.

ಸುಪ್ರೀಂಕೋರ್ಟ್‌ಲ್ಲಿ ಕಳೆದ ವಾರ ನಡೆದ ವಿಚಾರಣೆ ವೇಳೆ, ನಮಗೆ ಪೊಲೀಸರು ನೀಡಿರುವ ಸಾಕ್ಷ್ಯಗಳು ತೃಪ್ತಿ ತಂದಿವೆ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು. ಜತೆಗೆ ಹೈಕೋರ್ಟ್ ಜಾಮೀನು ನೀಡಲು ನೀಡಿರುವ ಕಾರಣಗಳು ಸಮಂಜ ಸವಾಗಿಲ್ಲ. ಹೈಕೋರ್ಟ್ ತನ್ನ ವಿವೇಚನೆ ಸೂಕ್ತವಾಗಿ ಬಳಸಿಲ್ಲ ಎಂದು ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿತ್ತು.

ಹೈಕೋರ್ಟ್ ನೀಡಿರುವ ಜಾಮೀನಿನ ವಿಷಯದಲ್ಲಿ ನಾವು ಏಕೆ ಮಧ್ಯಪ್ರವೇಶ ಮಾಡಬಾರದೆಂದು ಹೇಳಿ ಎಂದು



ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್‌ಗೆ ಸುಪ್ರೀಂ ಕೋರ್ಟ್ ಪ್ರಶ್ನಿಸಿತ್ತು.

ಜಾಮೀನು ನೀಡುವಾಗ ಹೈಕೋರ್ಟ್ ತನ್ನ ವಿವೇಚನೆಯನ್ನು ಸೂಕ್ತವಾಗಿ ಬಳಸಿಲ್ಲ ಎಂದು ನ್ಯಾ. ಪರ್ದಿವಾಲಾ ಆಕ್ಷೇಪಿಸಿದ್ದರು. ಈ ಬಗ್ಗೆ ಏನು ಹೇಳಬಯಸುತ್ತೀರಿ ಎಂದು ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್‌ಗೆ ಸುಪ್ರೀಂ ಕೋರ್ಟ್ ಪ್ರಶ್ನಿಸಿತ್ತು.

ಜಾಮೀನು ನೀಡುವಾಗ ಹೈಕೋರ್ಟ್ ತನ್ನ ವಿವೇಚನೆಯನ್ನು ಸೂಕ್ತವಾಗಿ ಬಳಸಿಲ್ಲ ಎಂದು ನ್ಯಾ. ಪರ್ದಿವಾಲಾ ಆಕ್ಷೇಪಿಸಿದ್ದರು. ಈ ಬಗ್ಗೆ ಏನು ಹೇಳಬಯಸುತ್ತೀರಿ ಎಂದು ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್‌ಗೆ ಸುಪ್ರೀಂ ಕೋರ್ಟ್ ಪ್ರಶ್ನಿಸಿತ್ತು. ಈ ಮೂಲಕ ನಟ ದರ್ಶನ್ ಹಾಗೂ ಉಳಿದವರಿಗೆ ಜಾಮೀನು ನೀಡಿರುವುದಕ್ಕೆ ಸುಪ್ರೀಂ ಕೋರ್ಟ್ ಅತೃಪ್ತಿ, ಅಸಮಾಧಾನ ವ್ಯಕ್ತಪಡಿಸಿತ್ತು.

ಸರ್ಕಾರಿ ವಕೀಲ ಅನಿಲ್ ನಿಶಾನಿ ಅವರು, ನಾವು ಸುಪ್ರೀಂ ಕೋರ್ಟ್‌ಗೆ ಕೊಟ್ಟಿರುವ ದಾಖಲೆಯನ್ನು ಕೋರ್ಟ್ ಪರಿಶೀಲನೆ ಮಾಡಿದೆ. ದರ್ಶನ್ ಅವರ ಇತರೆ ಅಪರಾಧಗಳ ಬಗ್ಗೆಯೂ ದಾಖಲೆ ನೀಡಿದ್ದೇವೆ. ಜತೆಗೆ ಜೈಲಿನಲ್ಲಿ ಮಾಡಿರುವ ಬೇರೆ ಚಟುವಟಿಕೆಗಳ ಬಗ್ಗೆಯೂ ದಾಖಲೆ ಕೊಟ್ಟಿದ್ದೇವೆ. ಹೈಕೋರ್ಟ್ ಬೇಲ್ ಆದೇಶದ ಬಗ್ಗೆ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ ಎಂದು ಹೇಳಿದ್ದರು.

ಹೈ ತೀರ್ಪಿಗೆ ಸುಪ್ರೀಂ ಅಸಮಾಧಾನ;ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಬೆನ್ನು ನೋವಿನ ಕಾರಣ ನೀಡಿ ಮಧ್ಯಂತರ ಜಾಮೀನು ಪಡೆದ ನಟ ದರ್ಶನ್ ಗೆ ಹೈಕೋರ್ಟ್‌ನಿಂದ ಪೂರ್ಣ ಪ್ರಮಾಣದ ಜಾಮೀನು ದೊರೆತಿತ್ತು. ಇದನ್ನು ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನೆ ಮಾಡಿತ್ತು.

ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋ ರ್ಟ್ ತೀರ್ಪನ್ನು ಕಾಯ್ದಿರಿಸಿ ಕರ್ನಾಟಕ ಹೈಕೋರ್ಟ್ ನೀಡಿದ ಆದೇಶದ ಬಗ್ಗೆ ಅಸಮಾಧಾನ ಹೊರಹಾಕಿದೆ.

ರಾಜ್ಯ ಸರ್ಕಾರದ ಪರ ವಕೀಲ ಸಿದ್ಧಾರ್ಥ್ ಲೂಥ್ರಾ ಮೊದಲು ವಾದ ಮಂಡಿಸಿ 'ಇದು ಭೀಕರ ಕೊಲೆ ಪ್ರಕರಣ ಏಳು ಆರೋಪಿಗಳಿಗೆ ಜಾಮೀನು ಸಿಕ್ಕಿದೆ. ಜಾಮೀನು ರದ್ದಾಗಬೇಕು ಎನ್ನುವುದು ನಮ್ಮ ವಾದ. ಅಪಾರ್ಟ್ ಮೆಂಟ್ ಬಳಿ ಡೆಡ್ ಬಾಡಿ ಸಿಕ್ಕಿದೆ' ಎಂದು ಅವರು ವಾದಿಸಿದರು. ಸದ್ಯ ಏಳು ಆರೋಪಿಗಳ ಜಾಮೀನನ್ನು ಮಾತ್ರ ರದ್ದು ಮಾಡಬೇಕು ಎಂದು ಕೋರಿದರು.

ಹೆಚ್ಚಿನ ಮಾಹಿತಿ ನೀಡಿ:ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಿಗೆ ಪ್ರಕರಣದ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದಿರಲಿಲ್ಲ. ಹೀಗಾಗಿ, ಅವರು ಪ್ರಕರಣದ ಕುರಿತು ಹೆಚ್ಚಿನ ಮಾಹಿತಿ ನೀಡಿ ಎಂದು ಸರ್ಕಾರಿ ಪರ ವಕೀಲರಿಗೆ ನ್ಯಾಯಮೂರ್ತಿಗಳು ಸೂಚಿಸಿದರು. ಆಗ ಸಿದ್ದಾರ್ಥ್ ಲೂತ್ರಾ ಅವರು ಎಲ್ಲವನ್ನೂ ವಿವರವಾಗಿ ಹೇಳಿದರು.

ದರ್ಶನ್ ಹಾಗೂ ಪವಿತ್ರಾ ಸಂಬಂಧ, ದರ್ಶನ್ ಕೊಲೆಯಲ್ಲಿ ಭಾಗಿ ಆಗಿದ್ದಕ್ಕೆ ಸಿಕ್ಕ ಸಾಕ್ಷಿಗಳು, ಜಾಮೀನು ಸಿಕ್ಕ ಬಳಿಕ ಸಾಕ್ಷಿಗಳ ಜೊತೆ ದರ್ಶನ್ ಕಾಣಿಸಿಕೊಂಡಿದ್ದು ಸೇರಿದಂತೆ ಎಲ್ಲವನ್ನೂ ವಿವರಿಸಿದರು.ವಿದೇಶದಲ್ಲಿ ದರ್ಶನ್ದರ್ಶನ್ ಅವರು ಇದೇ ತಿಂಗಳು 15ರಂದು ಥೈಲ್ಯಾಂಡ್‌ಗೆ ಪ್ರವಾಸ ಬೆಳೆಸಿದ್ದಾರೆ. 'ಡೆವಿಲ್' ಸಿನಿಮಾ ಶೂಟಿಂಗ್‌ಗೆ ಅವರು ಅಲ್ಲಿಗೆ ಹೋಗಿದ್ದಾರೆ. ಹಾಡಿನ ಚಿತ್ರೀಕರಣ ಹಾಗೂ ಒಂದು ಫೈಟ್ ದೃಶ್ಯದ ಶೂಟ್ ಬಾಕಿ ಇದೆ. ಜುಲೈ 25ರಂದು ಅವರು ಬೆಂಗಳೂರಿಗೆ ಮರಳಲಿದ್ದಾರೆ.

# ಬಿಜೆಪಿ ಕಾರ್ಯಕರ್ತರ ಹತ್ಯೆ: ತನಿಖೆಗೆ ಆಗ್ರಹ



**ಬೆಂಗಳೂರು,ಜು.24–** ಆಂಧ್ರ ಪ್ರದೇಶದಲ್ಲಿ ರಾಜ್ಯದ ಇಬ್ಬರು ಬಿಜೆಪಿ ಕಾರ್ಯಕರ್ತರ ಹತ್ಯೆ ಮಾಡಿರುವ ಪ್ರಕರಣವನ್ನು ಸೂಕ್ತ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಆಗ್ರಹಿಸಿದ್ದಾರೆ.

ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಿಜೆಪಿ ಕಾರ್ಯಕರ್ತರಾಗಿದ್ದ ಕೆ.ವಿ.ಪ್ರಶಾಂತ್ ರೆಡ್ಡಿ ಹಾಗೂ ಅವರ ತಂದೆ ವೀರಸ್ವಾಮಿರೆಡ್ಡಿ ಅವರು ಹತ್ಯೆಗೀಡಾಗಿರುವ ಘಟನೆ ಅತ್ಯಂತ ಅಮಾನವೀಯ ಹಾಗೂ ದುಃಖಕರ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹತ್ಯೆ ಪ್ರಕರಣವನ್ನು ಖಂಡಿಸಿ, ಮೃತರ ಆತ್ಮಕ್ಕೆ ಶಾಂತಿ ಕೋರುವೆ. ಕೊಲೆಗಡುಕರನ್ನು ಬಂಧಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ತನಿಖೆ ಚುರುಕುಗೊಳಿಸಲಿ ಎಂದು ಆಗ್ರಹಿಸಿದ್ದಾರೆ.

ನೊಂದ ಕುಟುಂಬಕ್ಕೆ ನ್ಯಾಯ ಸಿಗಲಿ. ಮೃತರ ಕುಟುಂಬ ವರ್ಗದವರಿಗೆ ಈ ದುಃಖ ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ ಎಂದಿದ್ದಾರೆ.ಆಂಧ್ರದಲ್ಲಿದ್ದ ವೀರಸ್ವಾಮಿರೆಡ್ಡಿ ಹಾಗೂ ಕೆ.ವಿ.ಪ್ರಶಾಂತ್ ರೆಡ್ಡಿ ಅವರು ಚೆಕ್‌ಬೌನ್ಸ್ ಪ್ರಕರಣ ಸಂಬಂಧ ನ್ಯಾಯಾಲಯಕ್ಕೆ ತೆರಳುತ್ತಿದ್ದರು. ಈ ವೇಳೆ 6 ಜನ ದುಷ್ಕರ್ಮಿಗಳು ಕಪ್ಪು ಬಣ್ಣದ ಕಾರಿನಲ್ಲಿ ಬಂದು ಇಬ್ಬರನ್ನು ಅಪಹರಿಸಿ ಬಳಿಕ ಕತ್ತು ಕೊಯ್ದು ಕೊಲೆ ಮಾಡಿದ್ದಾರೆ.

ತೀವ್ರ ಘಾಸಿ: ಆರ್ ಅಶೋಕ್

ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬಿಜೆಪಿ ಕಾರ್ಯಕರ್ತ ಕೆ.ವಿ. ಪ್ರಶಾಂತ್ ರೆಡ್ಡಿ ಹಾಗೂ ಅವರ ತಂದೆ ವೀರಸ್ವಾಮಿರೆಡ್ಡಿ ಅವರ ಹತ್ಯೆ ಮನಸ್ಸಿಗೆ ತೀವ್ರ ಘಾಸಿ ಉಂಟು ಮಾಡಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ.ಈ ದಾರುಣ ಹತ್ಯೆಗೈದ ಹಂತಕರನ್ನು ಪತ್ತೆ ಹಚ್ಚಿ ಅವರನ್ನು ಬಂಧಿಸಿ ಕಾನೂನಿಗೆ ಒಪ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ತ್ವರಿತ ಕ್ರಮ ಕೈಗೊಂಡು ಈ ಸಾವಿಗೆ ನ್ಯಾಯ ಕೊಡಿಸುವ ಕೆಲಸ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

# 16 ದಿನಗಳಲ್ಲಿ ಜಾತಿ ಸಮೀಕ್ಷೆ: ಪರಂ



**ಬೆಂಗಳೂರು, ಜು.24–**ತಂತ್ರಜ್ಞಾನ ಉಪ ಯೋಗಿಸಿಕೊಂಡು 16 ದಿನಗಳಲ್ಲಿ ಜಾತಿ ಜನಗಣತಿ ಸಮೀಕ್ಷೆ ಮಾಡಬಹುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಸದಾಶಿವನಗರದ ಗೃಹ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿಗಣತಿ ಸಮೀಕ್ಷೆ ವಿಚಾರದಲ್ಲಿ ಕೇಂದ್ರ ಸರ್ಕಾರಕ್ಕು ಮತ್ತು ರಾಜ್ಯಕ್ಕೆ ಸಂಘರ್ಷ ಏನೂ ಇಲ್ಲ. ರಾಜ್ಯದ ಮಟ್ಟಿಗೆ ನಾವು ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಸ್ಥಿತಿಗತಿ ತಿಳಿಯಲು ಸಮೀಕ್ಷೆ ಮಾಡುತ್ತಿದ್ದೇವೆ. ರಾಜ್ಯದ ವತಿಯಿಂದ ನಮಗೆನು ಮಾನದಂಡಗಳಲ್ಲಿ ಬೇಕು ಅದನ್ನು ಮಾಡುತ್ತೇವೆ. ಕೇಂದ್ರ ಸರ್ಕಾರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕವಾಗಿ ಸಮೀಕ್ಷೆ ಮಾಡುವುದಿಲ್ಲ. ಯಾರು ಎಷ್ಟು ಜನ ಇದ್ದಾರೆ ಎಂಬ ಅಂಕಿ ಅಂಶವನ್ನು ಮಾತ್ರ ಕೇಂದ್ರ ಮಾಡುತ್ತದೆ ಎಂದರು.

ಎಸ್‌ಐಟಿ ತಂಡದಿಂದ ಐಪಿಎಸ್ ಅಧಿಕಾರಿ ಹೊರಗುಳಿಯುವ ವಿಚಾರದ ಕುರಿತು ಮಾತನಾಡಿ,' ಅಧಿಕೃತವಾಗಿ ನನಗೆ ಅವರು ಮಾಹಿತಿ ತಿಳಿಸಿಲ್ಲ. ಆದರೆ ಅನ್‌ಅಫಿಷಿಯಲ್ ಆಗಿ ಅವರು ತಂಡದಿಂದ ಹೊರಗುಳಿಯುವ ವಿಚಾರಕ್ಕೆ ಪತ್ರ ಬರೆದಿರುವುದು ಗೊತ್ತಾಗಿದೆ. ವೈಯಕ್ತಿಕ ಕಾರಣ ಇದೆ ಹಾಗಾಗಿ ತಂಡದಿಂದ ಹೊರಗುಳಿಯುವ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ಒಂದು ವೇಳೆ ಆ ರೀತಿ ಇದ್ದರೆ, ಅವರನ್ನು ಬದಲಾಯಿಸಲಾಗುವುದು ಎಂದು ಹೇಳಿದರು.

ಆಂಧ್ರಪ್ರದೇಶದಲ್ಲಿ ಬೆಂಗಳೂರಿನ ಬಿಜೆಪಿ ಮುಖಂಡರ ಹತ್ಯೆ ಪ್ರಕರಣದಕುರಿತು ಪ್ರತಿಕ್ರಿಯಿಸಿ, ಆಂಧ್ರಪ್ರದೇಶ ಪೊಲೀಸರು ತನಿಖೆ ಮಾಡುತ್ತಾರೆ. ಹತ್ಯೆಯಾದವರು ನಮ್ಮ ರಾಜ್ಯದವರು ಆಗಿರುವುದರಿಂದ ಆಂಧ್ರ ಪೊಲೀಸರು ಇಲ್ಲಿಗೂ ಬಂದು ತನಿಖೆ ಮಾಡುತ್ತಾರೆ. ಆ ರಾಜ್ಯದ ಪೊಲೀಸರ ತನಿಖೆಗೆ ನಮ್ಮ ಪೊಲೀಸರು ಸಹಕಾರ ಮಾಡುತ್ತಾರೆ ಎಂದರು.

# ಸಂಸತ್‌ನಲ್ಲಿ ಕೋಲಾಹಲ: ಕಲಾಪಕ್ಕೆ ಅಡ್ಡಿ

**ನವದೆಹಲಿ,ಜು.24–** ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ನಡೆಯುತ್ತಿರುವ ಪ್ರತಿಷ್ಠೆ ಮತ್ತು ಹಗ್ಗ ಜಗ್ಗಾಟದ ಪರಿಣಾಮ ಸಂಸತ್ತಿನ ಮಳೆಗಾಲದ ಅಧಿವೇಶನದ ನಾಲ್ಕನೇ ದಿನ ಇಂದೂ ಕೂಡ ಕಲಾಪ ವ್ಯರ್ಥವಾಗಿದೆ. ಸಂಸತ್ತಿನ ಉಭಯ ಸದನಗಳು ಮಧ್ಯಾಹ್ನಕ್ಕೆ ಮುಂ ದೂಡಲಾಗಿದೆ

ಬಿಹಾರದ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ, ಆಪರೇಷನ್ ಸಿಂಧೂರ್ ಸೇರಿದಂತೆ ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಕಾಂಗ್ರೆಸ್ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಟದ ಸದಸ್ಯರು ಚರ್ಚೆಗೆ ಬಿಗಿಪಟ್ಟು ಹಿಡಿದಿದ್ದಾರೆ.

ಪ್ರತಿಪಕ್ಷಗಳ ಬೇಡಿಕೆಗೆ ಆಡಳಿತ ಪಕ್ಷದ ಸದ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಉಭಯ ಸದನಗಳಲ್ಲಿ ಗದ್ದಲ ಮಾತಿನ ಚಕಮಕಿ ಕೋಲಾಹಲ ನಡೆದು ಕಲಾಪ ಮದ್ಯಾಹ್ನ 2 ಗಂಟೆಗೆ ಮುಂದೂಡಲಾಗಿದೆ.

ಲೋಕಸಭೆ ಕಲಾಪ ಆರಂಭವಾಗುತ್ತಿದ್ದಂತೆ ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷದ ನಾಯಕರು ಕಳೆದ ನಾಲ್ಕು ದಿನಗಳಿಂದ ನಡೆಸುತ್ತಿರುವ ಪಟ್ಟು ಮುಂದುವರಿಸಿ ಎಲ್ಲಾ ಕಲಾಪ ಬದಿಗೊತ್ತಿ ಚರ್ಚೆಗೆ ಅವಕಾಶ ಮಾಡಿಕೊಡುವಂತೆ ಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿ ಮಾಡಿದರು, ಇದಕ್ಕೆ ಆಡಳಿತ ಪಕ್ಷದ ಸದಸ್ಯರು ತೀವ್ರ ಆಕ್ಷೇಪಿಸಿ ಅಡ್ಡಿಪಡಿಸಿದರು,



ಇದರಿಂದ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ತೀವ್ರ ಮಾತಿನ ಚಕಮಕಿ ನಡೆಯಿತು.

ಕಲಾಪವನ್ನು ಸರಿದಾರಿಗೆ ತರಲು ಸಭಾಧ್ಯಕ್ಷರು ಮಾಡಿದ ಎಲ್ಲಾ ಪ್ರಯತ್ನ ವಿಫಲವಾದ ಹಿನ್ನೆಲೆಯಲ್ಲಿ ಕಲಾಪವನ್ನು ಮಧ್ಯಾಹ್ನಕ್ಕೆ ಮುಂದೂಡಿದರು.ರಾಜ್ಯಸಭೆಯಲ್ಲಿಯೂ ಕೂಡ ಪರಿಸ್ಥಿತಿ ಭಿನ್ನವಾಗಿರಲಿಲ್ಲ ಆಡಳಿತ ಮತ್ತು ಪ್ರತಿ ಪಕ್ಷಗಳ ಸದಸ್ಯರ ಆರೋಪ ಪ್ರತ್ಯಾರೋಪದ ಹಿನ್ನೆಲೆಯಲ್ಲಿ ಕಲಾಪ ಗದ್ದಲ ಗೊಂದಲದ ಗೂಡಾಯಿತು,ಇಂಡಿಯಾ ಮೈತ್ರಿಕೂಟದ ಹೋರಾಟಬಿಹಾರದಲ್ಲಿ ಚುನಾವಣಾ ಆಯೋಗ ಕೈಗೆತ್ತಿಕೊಂಡಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ–ಎಸ್ ಐಆರ್ ನಡೆಸುತ್ತಿರುವ ಕ್ರಮವನ್ನು ಪ್ರತಿಭಟಿಸಿ ಕಾಂಗ್ರೆಸ್ ಸಂಸದೀಯ ಮಂಡಳಿ ಅಧ್ಯಕ್ಷೆ ಸೋನಿಯಾಗಾಂಧಿ ನೇತೃತ್ವದಲ್ಲಿ ಸಂಸತ್ ಭವನದ ಮುಂಭಾಗ ಪ್ರತಿಭಟನೆ ನಡೆಯಿತು.ಕಳೆದ ಮೂರು ದಿನಗಳಿಂದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಸಂಸತ್ ಭವನದ ಮುಂಬಾಗದಲ್ಲಿ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು, ನಾಲ್ಕನೇ ದಿನವಾದ ಇಂದು ಸೋನಿಯಾಗಾಂಧಿ ಹಾಗು ಸಂಸದೆ ಪ್ರಿಯಾಂಕ ಗಾಂಧಿ ಸೇರಿದಂತೆ ಇಂಡಿಯಾ ಮೈತ್ರಿಕೂಟದ ನಾಯಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು

ಬಿಹಾರದಲ್ಲಿ ವಿಶೇಷ ತೀವ್ರ ಮತದಾರರ ಪರಿಷ್ಕರಣೆಯನ್ನು ಚುನಾವಣಾ ಆಯೋಗ ಮತ್ತು ಕೇಂದ್ರ ಸರ್ಕಾರ ತಮ್ಮ ನಡೆಯಿಂದ ಹಿಂದೆ ಸರಿಯಬೇಕು. ಕೆಲವೇ ತಿಂಗಳಲ್ಲಿ ವಿಧಾನಸಭೆ ಚುನಾವಣೆ ಇರುವ ಹಿನ್ನೆಲೆಯಲ್ಲಿ ಅಸಂಖ್ಯಾತರು ಮತದಾನದಿಂದ ವಂಚಿತರಾಗುವ ಸಾಧ್ಯತೆ ಇದೆ ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ಧಾರೆ.

# ಕಲ್ಯಾಣ ಕರ್ನಾಟಕದಲ್ಲಿ ಮಾದಕ ವ್ಯಸನಿಗಳ ಸಂಖ್ಯೆ ಹೆಚ್ಚಳ

**ಕಲಬುರಗಿ,ಜು.24–** ಕಳೆದ ಮೂರು ನಾಲ್ಕು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಮಾದಕ ವ್ಯಸನದ ಸಂಖ್ಯೆ ಬಹಳ ಹೆಚ್ಚಾಗಿದೆ ಎಂದು ಕಲಬುರಗಿಯ ಮನೋವೈದ್ಯ ಡಾ. ರಾಹುಲ್ ಮಂದಕನಳ್ಳಿ ಹೇಳಿದರು. ಅವರು ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಎರಡುವಾರಗಳ ನಶಾ ಮುಕ್ತ ಭಾರತ ಕಾರ್ಯಕ್ರಮದ ಉದ್ಘಾಟನೆಯಲ್ಲಿ ಮಾತನಾಡುತ್ತಿದ್ದರು. ಈ ಕಾರ್ಯಕ್ರಮವನ್ನು ಸಿಯುಕೆಯ ಸಮಾನ ಅವಕಾಶಗಳ ಕೋಶ, ಸಮಾಜ ಕಾರ್ಯ ವಿಭಾಗ ಮತ್ತು ಮನೋವಿಜ್ಞಾನ ವಿಭಾಗ ಜಂಟಿಯಾಗಿ ಆಯೋಜಿಸಿದ್ದವು. ಅವರು ಮುಂದುವರೆದು ಮಾತನಾಡಿ, ಸಾಮಾಜಿಕ ಮಾಧ್ಯಮ ಮತ್ತು ಸಮೂಹ ಮಾಧ್ಯಮದ ಕಾರ್ಯಕ್ರಮಗಳು ಯುವಜನರಲ್ಲಿ ಮಾದಕ ವ್ಯಸನ ಹೆಚ್ಚಾಗಲು ಪ್ರಭಾವ ಬೀರುತ್ತಿವೆ. ಮಾದಕ ವ್ಯಸನವು ಯುವಕರ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತವೆ. ಈ ರೀತಿಯ




ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳು ಮಾದಕ ವ್ಯಸನಕ್ಕೆ ಆಕರ್ಷಿತರಾಗುವುದನ್ನು ತಡೆಯಲು ಸಹಾಯ ಮಾಡುತ್ತದೆ ಎಂದು ಹೇಳಿದರು.ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ನಶಾ ಮುಕ್ತ ಭಾರತ ಅಭಿಯಾನವನ್ನು ಉದ್ಘಾಟಿಸಿದರು.ಸಮಾಜ ವಿಜ್ಞಾನ ನಿಕಾಯದ ಡೀನ್ ಪ್ರೊ. ಪವಿತ್ರಾ ಆಲೂರ್ ಅವರು ಮಾತನಾಡಿದರು.ಇದಕ್ಕೂ ಮುನ್ನ ಮನೋವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಕಿರುನಾಟಕ ಪ್ರದರ್ಶಿಸಿ ಜಾಗೃತಿ ರ್ಯಾಲಿ ನಡೆಸಿದರು. ಡಾ. ಆಸ್ತಾ ಕಾರ್ಯಕ್ರಮವನ್ನು ನಿರೂಪಿಸಿದರು, ಪ್ರೊ. ದೇವರಾಜಪ್ಪ ಸ್ವಾಗತಿಸಿದರು, ಪ್ರೊ. ವಿಜಯೇಂದ್ರ ಪಾಂಡೆ, ಪ್ರೊ. ರೋಮಟೆ ಜಾನ್, ಡಾ. ಎಸ್. ಜಯವೇಲು, ಡಾ. ಲಕ್ಷ್ಮಣ, ಡಾ. ರವೀಂದ್ರ, ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಾವಿನಾಳ ಸಕ್ಕರೆ ಕಾರ್ಖಾನೆಯಿಂದ ರೈತರಿಗೆ ಸಕ್ಕರೆ ಹಂಚಿಕೆ ಪ್ರಾರಂಭ

**ಚಡಚಣ,ಜು.24–** ಹಾವಿನಾಳದ ಶ್ರೀ ದತ್ತಇಂಡಿಯಾ ಪ್ರೈ.ಲಿ. ಕಾರ್ಖಾನೆ ಕಡೆಯಿಂದ ಕಾರ್ಖಾನೆಯ ವ್ಯಾಪ್ತಿಯ ಒಳಗಿನ ಮತ್ತು ವ್ಯಾಪ್ತಿಯ ಹೊರಗಿನ ಕಬ್ಬು ಬೆಳೆಗಾರ ರೈತರಿಗೆ ಹಿಂದಿನ 2024–25 ನೆಯ ಸಾಲಿನಲ್ಲಿ ಕಬ್ಬು ನುರಿಸಲು ಕಳುಹಿಸಿದ ಎಲ್ಲ ಕಬ್ಬು ಬೆಳೆಗಾರ ರೈತರಿಗೆ ಪ್ರತಿ ಮೆ.ಟನ್ ಕಬ್ಬಿಗೆ ಅರ್ಧ ಕಿಲೋ ಸಕ್ಕರೆಯನ್ನು ರಿಯಾಯತಿ ದರದಲ್ಲಿ ವಿತರಣೆಯನ್ನು ಕಾರ್ಖಾನೆಯ ಸ್ಥಳದಲ್ಲಿ ಪ್ರಾದ ರಂಭಿಸಲಾಗಿದೆ.

ಈ ವೇಳೆಯಲ್ಲಿ ಕಾರ್ಖಾನೆಯ ಉಪಾಧ್ಯಕ್ಷ ಮೃತ್ಯುಂಜಯ ಶಿಂಧೆಯವರು 2024–25 ನೆಯ ಸಾಲಿನಲ್ಲಿ ನುರಿಸಲು ಬಂದಿರುವ ಕಬ್ಬಿನ ಎಲ್ಲಾ ಬಿಲ್, ಕಟಾವು ಸಾಗಾಣಿಕೆಯ ಬಿಲ್ ಇತ್ಯಾದಿ ಬಿಲ್ಲನ್ನು ಶ್ರೀ ದತ್ತ ಇಂಡಿಯಾ ಕಂಪನಿಯು ಸರಿಯಾದ ವೇಳೆಗೆ ಕೊಡಲಾಗಿದೆ ಮತ್ತು ಈ ವರ್ಷವು



ಕೂಡ ಅದೇ ತರಹ ಮುಂಬರುವ ಹಂಗಾಮಿನಲ್ಲಿ ಬಿಲ್ಲನ್ನು ಪಾವತಿಸಲಾಗುವದು ಎಂದು ಹೇಳಿದರು. ಆದ್ದರಿಂದ ಕಾರ್ಖಾನೆಯ ವ್ಯಾಪ್ತಿಯ ಒಳಗಿನ ಮತ್ತು ವ್ಯಾಪ್ತಿಯ ಹೊರಗಿನ ರೈತರು ಮುಂದೆ ಬರುವ ಹಂಗಾಮಿನಲ್ಲಿ ತಾವು ಬೆಳೆದ ಎಲ್ಲಾ ಕಬ್ಬನ್ನು ನೋಂದಣಿ ಮಾಡಿಸಿ ತಮ್ಮ ಎಲ್ಲಾ ಕಬ್ಬನ್ನು ನಮ್ಮ ಶ್ರೀ ದತ್ತ ಇಂಡಿಯಾ ಪ್ರೈ.ಲಿ, ಹಾವಿನಾಳ ಕಾರ್ಖಾನೆಗೆ ನುರಿಸಲು ಕಳುಹಿಸಬೇಕೆಂದು ಆಹ್ವಾನಿಸಿದರು. ಈ ಕಾರ್ಯಕ್ರಮಕ್ಕೆ ಜನರಲ್ ಮ್ಯನೇಜರ ಶರದ ಮೋರೆ, ಅಮೋಲ ಶಿಂಧೆ, ಆಡಳಿತಾಧಿಕಾರಿ ರವೀಂದ್ರ ಗಾಯಕವಾಡ, ಅಸಿ.ಜನರಲ್ ಮ್ಯಾನೇಜರ ಅನಿರುದ್ಧ ಪಾಟೀಲ, ಜಿತೇಂದ್ರ ಮೆಟಕರಿ, ಶ್ರೀಕಾಂತ ಕುಂಬಾರ, ಘಟಕದ ಮುಖ್ಯಸ್ಥ ಸುಬ್ಬುರತ್ನಂ, ಎಚ್.ಆರ್ ಮ್ಯಾನೇಜರ ವಿಜಯ ಹತ್ತೂರೆ, ಕೃಷಿ ಅಧಿಕಾರಿಗಳು ರವೀಂದ್ರ ಬಿರಾಜದಾರ, ಎಲ್ಲ ವಿಭಾಗ ಮುಖ್ಯಸ್ಥರು, ಗಟ್ ಮುಖ್ಯಸ್ಥರು ಎಲ್ಲಾ ಸಿಬ್ಬಂದಿ ಮತ್ತು ಕಬ್ಬು ಬೆಳೆಗಾರ ರೈತಬಾಂಧವರು ಉಪಸ್ಥಿತರಿದ್ದರು.

## ಜುಲೈ 30ರಂದು ಪಿಎಂಎಫ್‌ಎಂಇ ಯೋಜನೆಯ ಅರಿವು ಕಾರ್ಯಕ್ರಮ

**ರಾಯಚೂರು,ಜು.24–**ಪಿಎಂಎಫ್‌ಎಂಇ ಯೋಜನೆಯಡಿ ಜಿಲ್ಲಾ ಉಸ್ತುವಾರಿ ಸಚಿವರ ಮುಂದಾಳತ್ವದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಜುಲೈ 30ರ ಬೆಳಿಗ್ಗೆ 10ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಎಲ್ಲಾ ಪಾಲುದಾರರು ಭಾಗವಹಿಸಿ ಯಶಸ್ವಿಗೊಳಿಸುವಂತೆ ಕೋರಲಾಗಿದೆ.

ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮಗಳ ನಿಯಮಬದ್ದಗೊಳಿಸುವಿಕ (ಪಿಎಂಎಫ್‌ಎಂಇ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಒಂದು ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು, ರಾಜ್ಯದಲ್ಲಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಯ ಅಭಿವೃದ್ಧಿಗೆ ಸುವರ್ಣಾವಕಾಶ ಕಲ್ಪಿಸುತ್ತದೆ. ಈವರೆಗೂ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 6500 ಕ್ಕೂ ಹೆಚ್ಚು ಉದ್ದಿಮೆದಾರರಿಗೆ ಮಂಜೂರಾತಿಯಾಗಿದ್ದು, ಮುಖ್ಯಮಂತ್ರಿಗಳು ತಮ್ಮ 2025–26ನೇ ಸಾಲಿನ ಆಯವ್ಯಯ ಭಾಷಣದಲ್ಲಿ 5000 ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಸ್ಥಾಪಿಸುವ ಘೋಷಣೆ ಮಾಡಿ ಈ ಉದ್ದೇಶಕ್ಕಾಗಿ 206.00 ಕೋಟಿ ರೂ. ಅನುದಾನ ಒದಗಿಸಿದ್ದಾರೆ. ಪ್ರಸ್ತುತ ಹಣಕಾಸಿನ ವರ್ಷವು ಯೋಜನೆಯ ಅನುಷ್ಠಾನದ ಕೊನೆಯ ವರ್ಷವಾಗಿರುತ್ತದೆ.

ಈ ಯೋಜನೆಯ ಪ್ರಯೋಜನವನ್ನು ಪ್ರತಿ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳು ಪಡೆದುಕೊಳ್ಳುವ ಸಲುವಾಗಿ ಜಿಲ್ಲಾ ಉಸ್ತುವಾರಿ ಸಚಿವರ ಮುಂದಾಳತ್ವದಲ್ಲಿ ಪಿಎಂಎಫ್‌ಎಂಇ ಯೋಜನೆಯ ಬಗ್ಗೆ ವಿವಿಧ ಪಾಲುದಾರರಿಗೆ ಅರ್ಧ ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಕನಿಷ್ಟ 200 ಜನರಿಗೆ ಆಯೋಜಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರು ಸೇರಿದಂತೆ ಇತರೆ ಚುನಾಯಿತ ಪ್ರತಿನಿಧಿಗಳು, ಕೃಷಿ ಸಂಬಂಧಿತ ಇಲಾಖೆಗಳಾದ ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕ, ರೇಷ್ಮೆ ಕೃಷಿ, ಕೈಗಾರಿಕೆ, ಕಂದಾಯ ಇತ್ಯಾದಿ ಇಲಾಖಾ ಅಧಿಕಾರಿಗಳು, ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕರು, ಜಿಲ್ಲೆಯ ಇತರೆ ಪ್ರಮುಖ ಬ್ಯಾಂಕುಗಳ ಪ್ರತಿನಿಧಿಗಳು, ರೈತ ಉತ್ಪಾದಕ ಸಂಸ್ಥೆಗಳು, ರೈತ ಪರ ಸಂಘಟನೆಗಳು, ಪ್ರಗತಿಪರ ರೈತರು, ಆಹಾರ ಸಂಸ್ಕರಣಾ ಉದ್ದಿಮೆದಾರರು ಹಾಗೂ ನವೋದ್ಯಮಿಗಳು, ಎನ್‌ಆರ್‌ಎಲ್‌ಎಮ್ ಹಾಗೂ ಎನ್‌ಯೂಎಲ್‌ಎಮ್ ಅಡಿಯಲ್ಲಿ ಬೀಜ ಬಂಡವಾಳ ಪಡೆದು ಆಹಾರ ಸಂಸ್ಕರಣೆಯಲ್ಲಿ ತೊಡಗಿರುವ ಸ್ವಸಹಾಯಕ ಸಂಘದ ಸದಸ್ಯರು, ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಕಾರ್ಯಕ್ರಮದ ವಿವರ: ಅಂದು ಬೆಳಿಗ್ಗೆ 10 ರಿಂದ 10.30ರವರೆಗೆ ನೋಂದಣಿ, 10.30ರಿಂದ 11 ಗಂಟೆಯವರೆಗೆ ಉದ್ಘಾಟನೆ ಮತ್ತು ಪ್ರಾಸ್ತಾವಿಕ ನುಡಿ, 11 ರಿಂದ 12 ಗಂಟೆಯವರೆಗೆ ಪಿಎಂಎಫ್‌ಎಂಇ ಯೋಜನೆಯ ಬಗ್ಗೆ ಸಮಗ್ರ ಮಾಹಿತಿ – ಪ್ರಶ್ನೋತ್ತರಗಳು, ಮಧ್ಯಾಹ್ನ 12 ರಿಂದ 12.45 ಗಂಟೆಯವರೆಗೆ

ಬ್ಯಾಂಕ್‌ನಲ್ಲಿ ಸಾಲ ಸೌಲಭ್ಯದ ಅವಕಾಶಗಳು ಮತ್ತು ಸಾಲ ಪಡೆಯಲು ಅವಶ್ಯಕವಿರುವ ಅರ್ಹತೆಗಳು ದಾಖಲೆಗಳು– ಪ್ರಶ್ನೋತ್ತರಗಳು, 12.45 ರಿಂದ 1.30 ರವರೆಗೆ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು, ಯಶಸ್ವಿ ಫಲಾನುಭವಿಗಳಿಂದ ಅನುಭವ ಹಂಚಿಕೆ, 1.30 ರಿಂದ 2ರವರೆಗೆ ಲಘು ಊಟದ ವ್ಯವಸ್ಥೆ, 2 ರಿಂದ 5ರವರೆಗೆ ಅರ್ಜಿ ಸಲ್ಲಿಕೆ ಪರಿಶೀಲನೆ ಆಂದೋಲನ–ಆಸಕ್ತ ಉದ್ಯಮದಾರರ ಅರ್ಜಿಗಳನ್ನು ನಲ್ಲಿ ಅಪಲೋಡ್ ಮಾಡಲಾಗುವುದೆಂದು ಜಂಟಿ ಕೃಷಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಜುಲೈ 25ರಂದು ನೇರ ಸಂದರ್ಶನ

**ರಾಯಚೂರು,ಜು.24–**ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆಯಿಂದ ನಗರದ ರೂಡ್ಸ್ ಎಂ.ಎಸ್.ಡಬ್ಲೂ ಕಾಲೇಜಿನಲ್ಲಿ ಜುಲೈ 25ರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2ಗಂಟೆವರೆಗೆ ನೇರ ಸಂದರ್ಶನವನ್ನು ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ನೇರ ಸಂದರ್ಶನದಲ್ಲಿ ಆನೇಕ ಖಾಸಗಿ ಸಂಸ್ಥೆಗಳು ಭಾಗಿಯಾಗುತ್ತಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 32 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–231684, 9008211750, 8095125775, 7795195171 ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರಧ್ವಜವನ್ನು ಗೌರವಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.24–**ಭಾರತದ ಪ್ರತಿಯೊಬ್ಬ ಪ್ರಜೆಯು ರಾಷ್ಟ್ರಧ್ವಜವನ್ನು ಗೌರವಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ಅನೇಕ ಮಹನೀಯರ ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ಮೇಡಂ ಕಾಮಾ ಅವರಿಂದ ಹಿಡಿದು ಪಿಂಗಳ್ಳಿ ವೆಂಕಯ್ಯ ಅವರ ವರೆಗೆ ಅನೇಕ ಮಹನೀಯರು ಭಾರತ ದೇಶದ ರಾಷ್ಟ್ರಧ್ವಜಕ್ಕಾಗಿ ದುಡಿದರು ಅಲ್ಲದೆ ಅನೇಕ ರೀತಿಯ ವಿನ್ಯಾಸಗಳನ್ನು ಸಹ ರಚಿಸಿದರು. ಕೊನೆಗೆ ಪಿಂಗಲಿ ವೆಂಕಯ್ಯ ಅವರ



ವಿನ್ಯಾಸದ ರಾಷ್ಟ್ರಧ್ವಜಕ್ಕೆ ಮನ್ನಣೆ ಸಿಕ್ಕಿತು ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಜಂಟಿ ಕಾರ್ಯದರ್ಶಿ ಹಾಗೂ ಮಾನ್ವಿ ಪಬ್ಲಿಕ್ ಶಾಲೆಯ ಶಿಕ್ಷಕರಾದ ನರಸಿಂಹಮೂರ್ತಿ ದೇಸಾಯಿ ಮಾತನಾಡಿದರು. ಅವರು ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಆಯೋಜನೆ ಮಾಡಿದ್ದ ರಾಷ್ಟ್ರಧ್ವಜ ದಿನಾಚರಣೆಯ ಅಂಗವಾಗಿ ಮಾತನಾಡಿದರು. ಸಂದರ್ಭದಲ್ಲಿ ಶಾಲಾ ಕಾರ್ಯದರ್ಶಿ ಸಯ್ಯದ್ ಮುಜುತಾಬಾಕಾದ್ರಿ, ಮುಖ್ಯ ಗುರುಗಳಾದ ನಾಗರತ್ನ ದೇಸಾಯಿ ಸೇರಿದಂತೆ ಶಿಕ್ಷಕ ವೃಂದ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ರಾಷ್ಟ್ರಧ್ವಜದ ಬಣ್ಣಗಳ ಮಹತ್ವವನ್ನು ಮಕ್ಕಳಿಗೆ ವಿವರಿಸಲಾಯಿತು.

# ಹೇಮನೂರು ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು24–**ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ದೇವದುರ್ಗದ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಸಿರು ದೇವದುರ್ಗ ಪರಿಕಲ್ಪನೆಯ ಅಡಿಯಲ್ಲಿ ತಾಲೂಕಿನಾದ್ಯಂತ ಸಸಿ ನೆಡುವ ಕಾರ್ಯಕ್ರಮದ ಮುಂದುವರೆದ ಭಾಗವಾಗಿ ಗುರುವಾರ ತಾಲೂಕಿನ ಹೇಮನೂರ ಗ್ರಾಮದಲ್ಲಿ ಸಸಿಗಳನ್ನು ನೆಡಲಾಯಿತು. ಹೇಮನೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ 200 ಕ್ಕೂ ಹೆಚ್ಚಿನ ಸಸಿಗಳನ್ನು ನೆಡಲಾಯಿತು. ಈ ಸಂದರ್ಭದಲ್ಲಿ ಕೊತ್ತದೊಡ್ಡಿ ಗ್ರಾ. ಪಂ.ಅಧ್ಯಕ್ಷ



ರಾದ ತಿಪ್ಪಣ್ಣ ಯಲದೊಡ್ಡಿ, ಸಹಾಯಕ ಪ್ರಾಧ್ಯಾಪಕರಾದ ಡಾ.ಮಾರುತಿ ಕುಮಾರ ಮಲದಕಲ್, ಶಾಲೆಯ ಮುಖ್ಯ ಶಿಕ್ಷಕರಾದ ಬಸವರಾಜ, ಗ್ರಾ.ಪಂ.ಸದ್ಯಸರಾದ ಭೀಮನಗೌಡ ಮೇಟಿ, ಬಸವರಾಜ ವಕೀಲರು, ನರಸಣ್ಣ ದೊರೆ,ರಮೇಶ್ ಮೇಟಿ ಕೊತ್ತದೊಡ್ಡಿ, ಶಾಮೀದ್ ದೇವದುರ್ಗ, ಶಿವುಕುಮಾರ ಶಾಖೆ, ಶಿವಶಂಕರ್ ಕೋರಿ, ಸೂಗೂರೇಶ ಕೋರಿ, ಅಂಜನಯ್ಯ ನಾಯಕ ಗೂಗಲ್, ರಾಘವೇಂದ್ರ ಮಾಜಿ ಸದಸ್ಯರು, ಮಲ್ಲಿಕಾರ್ಜುನ. ಕೆ.ಬಾಬು ನದಾಫ್ ಸೇರಿದಂತೆ ಹೇಮನೂರು ಗ್ರಾಮದ ಯುವಕರು ಮತ್ತು ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.


ಸಹಾಯಕ ಪ್ರಾಧ್ಯಾಪಕರಾದ ಡಾ. ಮಾರುತಿ ಕುಮಾರ ಮಲದಕಲ್ ರವರ ನಾಯಕತ್ವದಲ್ಲಿ ದೇವದುರ್ಗ ತಾಲ್ಲೂಕಿನಾದ್ಯಂತ ಪ್ರತಿವರ್ಷ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಸಿರು ದೇವದುರ್ಗ ಪರಿಕಲ್ಪನೆಯ ಅಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಪ್ರತಿ ವರ್ಷ 5 ಸಾವಿರ ಸಸಿಗಳನ್ನು ನೆಡಲಾಗುತ್ತದೆ..

## ನಿರಂತರ ಮಳೆ ಹಿನ್ನೆಲೆ: ಭೂಕುಸಿತ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಕ್ಕೆ ಜಿಲ್ಲಾಧಿಕಾರಿಗಳ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.24–**2025ರ ಮಾನ್ಸೂನ್ ಅವಧಿಯಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಸುರಿಯುವ ಸಂಭವ ಇರುವ ಬಗ್ಗೆ ಭಾರತೀಯ ಹವಮಾನ ಇಲಾಖೆಯಿಂದ ಮುನ್ಸೂಚನೆ ನೀಡಲಾಗಿದ್ದು, ಭೂಕುಸಿತ ಪೀಡಿತ ಮತ್ತು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯ ಎಲ್ಲ ತಹಸೀಲ್ದಾರಗಳಿಗೆ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಸಹಾಯಕ ಆಯುಕ್ತರು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿ ಸೂಚನೆ ನೀಡಿದ್ದಾರೆ.



ಪ್ರಸ್ತುತ ಮುಂಗಾರು ಹಂಗಾಮಿನ ಅವಧಿಯಲ್ಲಿ ವಾಡಿಕೆಗಿಂತ ಅತೀ ಹೆಚ್ಚಿನ ಮಳೆಯು ಆಗುವ ಸಂಭವವಿರುವುದರಿಂದ ಪ್ರವಾಹ ಮತ್ತು ಭೂ ಕುಸಿತ ಉಂಟಾಗುವ ಸಾಧ್ಯತೆಯಿರುತ್ತದೆ ಎಂದು ನವದೆಹಲಿಯ ರಾಷ್ಟ್ರೀಯ ವಿಪತ್ತು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಆಗಬಹುದಾದ ಅವಘಡಗಳನ್ನು ನಿಯಂತ್ರಿಸಲು ಸೂಚಿಸಿರುವುದರಿಂದ ರಾಯಚೂರು ಜಿಲ್ಲೆಯಲ್ಲಿ ಪ್ರವಾಹದ ಮುನ್ನಚ್ಚರಿಕೆ ಕ್ರಮವಾಗಿ ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಗಳು ಹಾಗೂ ಹವಾಮಾನ ಎಚ್ಚರಿಕೆಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಿ, ಸ್ಥಳೀಯ ಅಧಿಕಾರಿಗಳಿಗೆ ಮತ್ತು ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳ ನಾಗರಿಕರಿಗೆ ಸಂಬಂಧಿತ ಮಾಹಿತಿಯನ್ನು ತ್ವರಿತವಾಗಿ ನೀಡ ಬೇಕು. ಪ್ರವಾಹ ಪೀಡಿತ ಗ್ರಾಮಗಳಲ್ಲಿ ನದಿ ದಡದಲ್ಲಿ ಯಾವುದೇ ಚಟುವಟಿಕೆ ನಡೆಸದಂತೆ ಹಾಗೂ ಜನ–ಜಾನುವಾರು ಹೋಗದಂತೆ ಡಂಗೂರ ಟಾಂ–ಟಾಂ ಸಾರುವುದು ಅಥವಾ ಮೈಕ್ ಮೂಲಕ ಜಾಗೃತಿ ಮೂಡಿಸಬೇಕು.ಕಚೇರಿಗಳಲ್ಲಿ ಕಂಟ್ರೋಲ್ ರೂಮ್ ತೆರೆದು 24 ಗಂಟೆ ಕಂಟ್ರೋ ಲ್ ರೂಮ್‌ಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಯನ್ನು ನಿಯೋಜಿಸುವುದು ಹಾಗೂ ಸಾರ್ವಜನಿಕರಿಗೆ ಮಾಹಿತಿಗಾಗಿ ಪತ್ರಿಕೆಗಳಲ್ಲಿ ಕಂಟ್ರೋಲ್ ರೂಮ್ ವಿವರ ನೀಡಬೇಕು. ಜಿಲ್ಲೆಯ ತಾಲೂಕು ಮಟ್ಟದಲ್ಲಿ ಪ್ರವಾಹವನ್ನು ನಿಭಾಯಿಸಲು ವಿವಿಧ ಸಮಿತಿಗಳನ್ನು ರಚಿಸಿ ನೋಡಲ್ ಅಧಿಕಾರಿಗಳನ್ನು ನಿಯೋಜಿಸಬೇಕು.

ಈಗಾಗಲೇ ಗುರುತಿಸಿದ ಕಾಳಜಿ ಕೇಂದ್ರಗಳನ್ನು ಸನ್ನದ್ಧ ಸ್ಥಿತಿಯಲ್ಲಿಟ್ಟುಕೊಳ್ಳುವುದು ಹಾಗೂ ಕಾಳಜಿ ಕೇಂದ್ರಗಳನ್ನು ನಿಭಾಯಿಸಲು ಬೇಕಾದ ಕನಿಷ್ಟ ಸಿಬ್ಬಂದಿಯನ್ನು ಗುರುತಿಸಿಟ್ಟುಕೊಳ್ಳಬೇಕು. ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳೊಂದಿಗೆ ಸಮನ್ವಯದೊಂದಿಗೆ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಬೇಕು. ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳ ಸಭೆ ಕರೆದು ಈ ಬಗ್ಗೆ ಸೂಕ್ತ ಮುಂಜಾಗೃತ ಕ್ರಮ ತೆಗೆದುಕೊಳ್ಳಬೇಕು.

ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಯು ಕೇಂದ್ರ ಸ್ಥಾನದಲ್ಲಿದ್ದುಕೊಂಡು ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಬೇಕು. ಪ್ರವಾಹ ಅಥವಾ ಮಳೆಗೆ ನಿಯೋಜಿಸಲ್ಪಟ್ಟ ತಾಲೂಕು ಮಟ್ಟದ ಅಧಿಕಾರಿ ಅಥವಾ ಸಿಬ್ಬಂದಿಗಳು ಸಹಾಯಕ ಆಯುಕ್ತರ ಅನುಮತಿಯಿಲ್ಲದೆ ರಜೆಯನ್ನು ಪಡೆಯತಕ್ಕದಲ್ಲ.ಗ್ರಾಮ ಪಂಚಾಯತ್ ವಿಪತ್ತು ನಿರ್ವಹಣಾ ಸಮಿತಿಯನ್ನು ನವಿಕರಿಸಿ, ವಿಪತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಈ ಸಮಿತಿಯು ಸಜ್ಜಾಗಬೇಕು. ಅಧಿಕಾರಿಗಳು ಹಾಗೂ ಸಿಬ್ಬಂದಿ ತಮ್ಮ ಜವಾಬ್ದಾರಿಗಳಲ್ಲಿ ಮತ್ತು ಕರ್ತವ್ಯದಲ್ಲಿ ಲೋಪ ಕಂಡು ಬಂದರೆ ಅಂತವರ ವಿರುದ್ಧ ಜಿಲ್ಲಾ ವಿಪತ್ತು ನಿರ್ವಹಣಾ ಕಾಯ್ದೆ 2005 ರನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಯೋಶ್ರೇಷ್ಠ ರಾಜ್ಯ ಪ್ರಶಸ್ತಿಗೆ ಪ್ರಸ್ತಾವನೆ ಸಲ್ಲಿಸಲು ಅರ್ಜಿ ಆಹ್ವಾನ

**ರಾಯಚೂರು,ಜು.24–**ಇಲ್ಲಿನ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ವತಿಯಿಂದ ವಿಶ್ವ ಹಿರಿಯ ನಾಗರೀಕರ ದಿನಾಚರಣೆ–2025ರ ಸಂಬಂಧ ಹಿರಿಯ ನಾಗರೀಕರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ ವಯೋಶ್ರೇಷ್ಠ ರಾಜ್ಯ ಪ್ರಶಸ್ತಿಗೆ ಪ್ರಸ್ತಾವನೆಗಳನ್ನು ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಿರಿಯ ನಾಗರೀಕರು ವಿವಿಧ ಕ್ಷೇತ್ರಗಳಾದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ ಹಾಗೂ ಕ್ರೀಡೆ ಹಾಗೂ ಹಿರಿಯ ನಾಗರೀಕರ ಕ್ಷೇತ್ರದಲ್ಲಿ ಸಮಾಜ ಸೇವೆಯನ್ನು ಒಳಗೊಂಡಂತೆ 6 ವೈಯಕ್ತಿಕ ರಾಜ್ಯ ಪ್ರಶಸ್ತಿಗಳನ್ನು ಮತ್ತು ಹಿರಿಯ ನಾಗರೀಕರ ಕ್ಷೇತ್ರದಲ್ಲಿ ಉತ್ತಮ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ರಾಜ್ಯ ಪ್ರಶಸ್ತಿ ಸೇರಿದಂತೆ ಒಟ್ಟು 07 ಪ್ರಶಸ್ತಿಗಳನ್ನು ನೀಡಲು ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ ಪಡೆಯಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಮಾವಿನ ಕೆರೆ ಆಜಾದ ನಗರ, ರಾಯಚೂರು ದೂರವಾಣಿ ಸಂಖ್ಯೆ: 08532–200992ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಅರ್ಜಿ ಆಗಸ್ಟ್ 25ರೊಳಗಾಗಿ ಸಲ್ಲಿಸಬಹುದಾಗಿದೆ. ತಡವಾಗಿ ಬಂದಂತಹ ಪ್ರಸ್ತಾವನೆಗಳ ಪರಿಗಣಿಸುವುದಿಲ್ಲ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಸ್ಕಿ ಪುರಸಭೆಯಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜು.24–**ಜಿಲ್ಲೆಯ ಮಸ್ಕಿ ಪುರಸಭೆ ವತಿಯಿಂದ 2025–26ನೇ ಸಾಲಿನ ಪುರಸಭೆ ನಿಧಿ ಶೇ22, 7.25, 5ರ ವೈಯಕ್ತಿಕ ಕಲ್ಯಾಣ ಕಾರ್ಯಕ್ರಮದ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಹ ಧನ, ವಿಕಲಚೇತನರ ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಿಸಲು ಸಹಾಯ ಧನ ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಅಡುಗೆ ಅನಿಲ ಸಂಪರ್ಕ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಆಗಸ್ಟ್ 14ರ ಸಂಜೆ 5.30ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಪುರಸಭೆಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಷರತ್ತುಗಳಿಗಾಗಿ ಕಚೇರಿ ಸಮಯದಲ್ಲಿ ನೋಟಿಸ್ ಬೋರ್ಡನಲ್ಲಿ ನೊಡಬಹುದು ಅಥವಾ ಕಚೇರಿ ವೆಬ್ ಸೈಟ್ ವಿಳಾಸ: www.maskitown.mrc.gov.in ನಲ್ಲಿ ನೋಡಬಹುದಾಗಿದೆ ಎಂದು ಮಸ್ಕಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 31 ರವರೆಗೆ ಪ್ರಧಾನಮಂತ್ರಿ ಮಾತೃ ವಂದನಾ ವಿಶೇಷ ನೋಂದಣಿ ಅಭಿಯಾನ

**ರಾಯಚೂರು,ಜು.24–**ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ವಿಶೇಷ ಅರ್ಹ ಫಲಾನುಭವಿಗಳ ನೋಂದಣಿ ಅಭಿಯಾನವನ್ನು ಜುಲೈ 31ರವರೆಗೂ ಹಮ್ಮಿಕೊಳ್ಳಲಾಗಿದೆ.

ಯೋಜನೆಯಡಿ ಮೊದಲ ಪ್ರಸವದ ಗರ್ಭಿಣಿ ಮತ್ತು ಬಾಣಂತಿಯರಿಗೆ 5000 ರೂ.ಗಳು ಎರಡು ಕಂತುಗಳಲ್ಲಿ ನೀಡಲಾಗುತ್ತಿದೆ. ಎರಡನೇ ಪ್ರಸವದಲ್ಲಿ (ಹೆಣ್ಣು ಮಗು ಜನಿಸಿದಲಿ ಮಾತ್ರ) ಬಾಣಂತಿ ತಾಯಂದಿರಿಗೆ 6000 ರೂ.ಗಳು ಒಂದೇ ಕಂತಿನಲ್ಲಿ ನೀಡಲಾಗುತ್ತಿದೆ. ಈ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಯು ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರರು ಮತ್ತು ಸರಕಾರಕ್ಕೆ ತೆರಿಗೆ ಕಟ್ಟುವವರು ಹೊರತುಪಡಿಸಿ ಉಳಿದೆಲ್ಲ ಅರ್ಹರಾಗಿರುತ್ತಾರೆ. ಹಾಗೂ ಈ ಯೋಜನೆಯ ಮುಖ್ಯ ಉದ್ದೇಶ ಗರ್ಭಿಣಿ ಮತ್ತು ಬಾಣಂತಿ ಸಮಯದಲ್ಲಿ ವೇತನ ನಷ್ಟ ಬರಿಸಿ ಆದಷ್ಟು ವಿಶ್ರಾಂತಿ ಪಡೆದುಕೊಳ್ಳುವುದು, ಪೌಷ್ಟಿಕ ಆಹಾರ ಸೇವನೆ ಮಾಡಲು ನೀಡಲಾಗುತ್ತಿದ್ದು. ಈ ಯೋಜನೆಯ ಹೆಚ್ಚಿನ ಮಾಹಿತಿ ಪಡೆಯಲು ತಮ್ಮ ಹತ್ತಿರದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್. ಯು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 27ರಂದು ಲಿಂಗಸುಗೂರಲ್ಲಿ ಸಚಿವರಿಂದ ಸಭೆ

**ರಾಯಚೂರು,ಜು.24–**ಜಿಲ್ಲೆಯ ಲಿಂಗಸೂಗೂರು ತಾಲೂಕಿಗೆ ಸಂಬಂಧಿಸಿದಂತೆ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜುಲೈ 27ರ ಮಧ್ಯಾಹ್ನ 2.30ಗಂಟೆಗೆ ತಾಲೂಕ ಪಂಚಾಯತ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಸಭೆಗೆ ಅಗತ್ಯ ಮಾಹಿತಿಯೊಂದಿಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಯು ಖುದ್ದಾಗಿ ಹಾಜರಾಗುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H